ವಿಜಯಪುರ | ಸಂಪುಟ 01 | ಸಂಚಿಕೆ 237 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com | Title Code: KARKAN28047 | ಭಾನುವಾರ, ನವೆಂಬರ್ 12, 2023




ಬರ ಪರಿಹಾರ ಮೊತ್ತ ಬಿಡುಗಡೆಗೆ ಕೇಂದ್ರಕ್ಕೆ ಮನವಿ | ಫ್ರೂಟ್ಸ್ ದತ್ತಾಂಶದ ಆಧಾರದಲ್ಲಿ ಪರಿಹಾರ ವಿತರಣೆ

# ಡಿಸೆಂಬರ್ ವೇಳೆಗೆ ರೈತರಿಗೆ ಬರ ಪರಿಹಾರ

## ಕಂದಾಯ ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟನೆ



ಬೆಂಗಳೂರು: ಬರಗಾಲದಿಂದ ಆಗಿರುವ ಬೆಳೆ ಹಾನಿಗೆ 'ರೈತರ ನೋಂದಣಿ ಮತ್ತು ಏಕೀಕೃತ ಫಲಾನುಭವಿಗಳ ಮಾಹಿತಿ ವ್ಯವಸ್ಥೆ' (ಫ್ರೂಟ್ಸ್) ದತ್ತಾಂಶದ ಆಧಾರದಲ್ಲೇ ಪರಿಹಾರ ವಿತರಣೆ ಮಾಡಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಶನಿವಾರ ಹೇಳಿದರು.

ಎಲ್ಲ ಜಿಲ್ಲಾಧಿಕಾರಿಗಳು ಮತ್ತು ಆಯ್ದ ಉಪ ವಿಭಾಗಾಧಿಕಾರಿಗಳು ಹಾಗೂ ತಹಶೀಲ್ದಾರರ ಜೊತೆ ಸಭೆ ನಡೆಸಿದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ವಿವರ ನೀಡಿದ ಅವರು, 'ಹಿಂದಿನ ವರ್ಷಗಳಲ್ಲಿ ಬರ ಪರಿಹಾರ ವಿತರಣೆಯಲ್ಲಿ ವ್ಯಾಪಕ ಅವ್ಯವಹಾರ ನಡೆದಿರುವುದು ಪತ್ತೆಯಾಗಿತ್ತು. ಅಕ್ರಮಗಳನ್ನು ತಡೆಯುವುದಕ್ಕಾಗಿ ಫ್ರೂಟ್ಸ್ ದತ್ತಾಂಶದ ಆಧಾರದಲ್ಲಿ ಪರಿಹಾರ ವಿತರಣೆಗೆ ನಿರ್ಧರಿಸಲಾಗಿದೆ. ಎಲ್ಲವೂ ಅಂದುಕೊಂಡಂತೆ ಆದರೆ, ಡಿಸೆಂಬರ್‌ನಲ್ಲಿ ರೈತರಿಗೆ ಪರಿಹಾರ ಸಿಗುವ ಸಾಧ್ಯತೆಯಿದೆ ಎಂದು ಹೇಳಿದರು.

ರಾಜ್ಯದ ಶೇಕಡ 95ರಷ್ಟು ರೈತರು ಫ್ರೂಟ್ಸ್ ಗುರುತಿನ ಸಂಖ್ಯೆ ಹೊಂದಿದ್ದಾರೆ. ಆದರೆ, ಒಟ್ಟು ಸಾಗುವಳಿ ವಿಸ್ತೀರ್ಣದ ಶೇ 63ರಷ್ಟು ಮಾತ್ರ ದತ್ತಾಂಶದಲ್ಲಿ ದಾಖಲಾಗಿದೆ. ಆದ್ದರಿಂದ ವಿಸ್ತೀರ್ಣದ ವಿವರವನ್ನು ದಾಖಲಿಸಲು 15 ದಿನಗಳ ಕಾಲಾವಕಾಶ ನೀಡಲಾಗುವುದು. ನಂತರದಲ್ಲಿ ಫ್ರೂಟ್ಸ್ ದತ್ತಾಂಶದಲ್ಲಿ ದಾಖಲಾದ ವಿಸ್ತೀರ್ಣದ ಆಧಾರದಲ್ಲೇ ಪರಿಹಾರ ವಿತರಣೆ ನಡೆಯಲಿದೆ ಎಂದು ತಿಳಿಸಿದರು.

ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಮತ್ತು ಕಂದಾಯ ಇಲಾಖೆ ಕಚೇರಿಗಳಲ್ಲಿ ಫ್ರೂಟ್ಸ್ ದತ್ತಾಂಶದಲ್ಲಿ ವಿಸ್ತೀರ್ಣ ದಾಖಲಿಸಲು ಅವಕಾಶ ಕಲ್ಪಿಸಲಾಗುವುದು. ರೈತರು ಈ ಅವಕಾಶವನ್ನು ಬಳಸಿಕೊಳ್ಳಬೇಕು ಎಂದರು.

ಡಿಸೆಂಬರ್ ನಲ್ಲಿಯೇ ಪರಿಹಾರ ಸಿಗಲಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿ,

> ಭೇಟಿಗೆ ಅವಕಾಶ ಕಲ್ಪಿಸುವಂತೆ ಕೇಂದ್ರ ಸರ್ಕಾರಕ್ಕೆ 10 ಬಾರಿ ಪತ್ರ ಬರೆದಿದ್ದೇವೆ. ದೆಹಲಿಯಲ್ಲಿ ಭೇಟಿಗೆ ಅವಕಾಶ ಸಿಗದಿದ್ದರೆ, ಬೇರೆ ಯಾವುದೇ ರಾಜ್ಯ, ಪ್ರದೇಶದಲ್ಲಿ ಬೇಕಾದರೂ ನಾವೇ ಭೇಟಿಗೆ ಬರುತ್ತೇವೆಂದೂ ತಿಳಿಸಿದ್ದೇವೆ. ಆದರೆ, ಇಲ್ಲಿಯವರೆಗೂ ನಮಗೆ ಸಮಯ ನೀಡಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ಬೇಸರ ವ್ಯಕ್ತಪಡಿಸಿದರು.

ಕೇಂದ್ರ ತಂಡ ಕರ್ನಾಟಕದಲ್ಲಿದ್ದು, ಈಗಾಗಲೇ ಸರ್ಕಾರ ಅಂಕಿಅಂಶವನ್ನು ನೀಡಿದೆ. ಪರಿಹಾರದ ಮೊತ್ತ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದೇವೆ. ಶೀಘ್ರದಲ್ಲೇ ಬಿಡುಗಡೆಯಾಗುವ ವಿಶ್ವಾಸವಿದೆ. ರೈತರ ಅಂಕಿಅಂಶಗಳನ್ನು ಸಿದ್ಧಪಡಿಸಲಾಗುತ್ತಿದೆ. ಕೇಂದ್ರದಿಂದ ಹಣ ಬಂದರೆ ಎರಡು ದಿನದಲ್ಲಿ ಪರಿಹಾರ ನೀಡಬಹುದು ಎಂದು ಹೇಳಿದರು.

ಹಿಂದಿನ ವರ್ಷಗಳಲ್ಲಿ ನೈಸರ್ಗಿಕ ವಿಕೋಪಗಳ ಸಂದರ್ಭದಲ್ಲಿ ನೀಡಿದ ಪರಿಹಾರದ ಕುರಿತು ಮಾತನಾಡಿ, ರೈತರ ಕುರಿತ ಮಾಹಿತಿಗಳನ್ನು ಅಧಿಕಾರಿಗಳು ಸ್ವತಃ ನಮೂದಿಸಿದ್ದು, ಇಲ್ಲಿ ಅಕ್ರಮಗಳು ನಡೆದಿರುವುದು, ಅಧಿಕಾರಿಗಳು ಹಣವನ್ನು ದುರುಪಂಯೋಗಪಡಿಸಿಕೊಂಡಿರುವುದು ಕಂಡು ಬಂದಿದೆ. ಹೀಗಾಗಿಯೇ ಫ್ರೂಟ್ಸ್ ದತ್ತಾಂಶದ ಆಧಾರದಲ್ಲಿ ಪರಿಹಾರ ವಿತರಣೆಗೆ ನಿರ್ಧರಿಸಲಾಗಿದೆ ಎಂದು ಹೇಳಿದರು.

ಸಮಸ್ಯೆಗಳ ಬಗ್ಗೆ ಗುಡುಗಿದ್ದ ಶಾಸಕ ಯಶವಂತ್ರಾಯಗೌಡ | ಸಿಎಂ ಬೇಡಿಕೆ ಈಡೇರಿಸುವ ಭರವಸೆ

# ಶಾಸಕ ಯಶವಂತ್ರಾಯಗೌಡರಿಗೆ ಸಿಎಂರಿಂದ ಸಕಾರಾತ್ಮಕ ಸ್ಪಂದನೆ

ಉದಯರಶ್ಮಿ ನ್ಯೂಸ್



ವಿಜಯಪುರ: ಕ್ಷೇತ್ರದ ಕೊನೆ ಭಾಗಕ್ಕೆ ನೀರು ತಲುಪದಿರುವುದು, ಬರ ನಿರ್ವಹಣೆಯಲ್ಲಿ ವೈಫಲ್ಯ ಸೇರಿದಂತೆ ಸಚಿವರ ಆಡಳಿತದ ಬಗ್ಗೆ ಗುಡುಗಿದ್ದ ಕಾಂಗ್ರೆಸ್ ಇಂಡಿ ಶಾಸಕ ಯಶವಂತ್ರಾಯಗೌಡ ಅವರಿಗೆ ಸಿಎಂ ಸಿದ್ದರಾಮಯ್ಯ ಬೇಡಿಕೆ ಈಡೇರಿಸುವ ಭರವಸೆ ನೀಡಿದ್ದಾರೆ.

ಈ ಕುರಿತು ಶನಿವಾರ ಮಾಧ್ಯಮಗಳಿಗೆ ಹೇಳಿಕೆ ಬಿಡುಗಡೆ ಮಾಡಿದ ಶಾಸಕ ಯಶವಂತ್ರಾಯಗೌಡ ಪಾಟೀಲ ಅವರು, ಇಂಡಿ ಪ್ರತ್ಯೇಕ ಜಿಲ್ಲೆ ರಚನೆ, ಇಂಡಿ, ಸಿಂದಗಿ ತಾಲೂಕಗಳನ್ನು ಸಂವಿಧಾನದ 371 (ಜೆ) ಕಲಂ ವ್ಯಾಪ್ತಿಗೆ ಸೇರ್ಪಡಿಸಿ, ವಿಶೇಷ ಸೌಲಭ್ಯ ಕಲ್ಪಿಸುವುದು, ಕ್ಷೇತ್ರದ ನೀರಾವರಿ ಯೋಜನೆಗಳಿಗೆ ಕೊನೆಯ ಭಾಗಕ್ಕೆ ನೀರು ತಲುಪಲು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದು, ಸಿಎಂ ಸಕಾರಾತ್ಮಕ ಸ್ಪಂದಿಸಿದ್ದಾಗಿ ಹೇಳಿದ್ದಾರೆ.

ಇಂಡಿ ವಿಧಾನಸಭೆ ಕ್ಷೇತ್ರದಲ್ಲಿ ಮೂರು ಬಾರಿ ಶಾಸಕನಾಗಿರುವ ನಾನು ಕ್ಷೇತ್ರದಲ್ಲಿ ನೀರಾವರಿ ಯೋಜನೆಗಳ ಕೊನೆ ಭಾಗಕ್ಕೆ ನೀರು ಹರಿಯದಿದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವ ಹಾಗೂ ರಾಜಕೀಯ ನಿವೃತ್ತಿ ಘೋಷಿಸುವುದಾಗಿ ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದೆ. ಇದನ್ನು ಗಮನಿಸಿರುವ ಸಿಎಂ ಸಿದ್ದರಾಮಯ್ಯ ಹಾಗು ಪಕ್ಷದ ಪ್ರಮುಖರು ನನ್ನನ್ನು ದೂರವಾಣಿ ಮೂಲಕ ಸಂಪರ್ಕಿಸಿ, ಸಮಸ್ಯೆಗಳ ಕುರಿತು ಚರ್ಚಿಸಿ, ಪರಿಹರಿಸುವ ಭರವಸೆ ನೀಡಿದ್ದಾಗಿ ಹೇಳಿದ್ದಾರೆ.

ಇದಲ್ಲದೇ ನ.10 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆಂಗಳೂರಿನಲ್ಲಿ ನಿವಾಸದಲ್ಲಿ ಭೇಟಿಯಾಗಿ, ಇಂಡಿ ಕ್ಷೇತ್ರದ ಜ್ವಲಂತ ಸಮಸ್ಯೆಗಳ ಕುರಿತು ವಿವರಿಸಿದಾಗ, ಮುಖ್ಯಮಂತ್ರಿಗಳು ಸಕಾರಾತ್ಮಕ ಸ್ಪಂದನೆ ನೀಡಿದ್ದಾರೆ. ಅಲ್ಲದೆ ಸಮಸ್ಯೆಗಳನ್ನು ಪ್ರಾಮಾಣಿಕವಾಗಿ ಬಗೆಹರಿಸುವ ಭರವಸೆ ನೀಡಿದ್ದಾಗಿ ವಿವರಿಸಿದ್ದಾಗಿ ಶಾಸಕ ಯಶವಂತ್ರಾಯಗೌಡ ವಿವರಿಸಿದ್ದಾರೆ.

ಇಂಡಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಇಂಡಿ ಶಾಖಾ ಕಾಲುವೆ, ಗುತಿ ಬಸವಣ್ಣ ಕಾಲುವೆ ಕೊನೆ ಭಾಗಕ್ಕೆ ನೀರು ತಲುಪಿಸುವುದು, ಮುಳವಾಡ ಏತ ನೀರಾವರಿ ಯೋಜನೆ ಮೂಲಕ ತಡವಲಗಾ, ಅಥರ್ಗಾ, ಹಂಜಗಿ, ನಿಂಬಾಳ ಕೆರೆಗಳಿಗೆ ನೀರು ತುಂಬಿಸುವುದು. ಅಣಚಿ ಕೆರೆ ತುಂಬುವ ಯೋಜನೆಯಲ್ಲಿ ಕೆರೆಗಳಿಗೆ ಸಮರ್ಪಕವಾಗಿ ನೀರು ತುಂಬಿಸುವುದು, ಭುಯಾರ ಕೆರೆ ನೀರು ತುಂಬುವ ಯೋಜನೆ ಸ್ಥಗಿತಗೊಂಡಿದ್ದು, ಆರಂಭಿಸುವ ಭರವಸೆ ನೀಡಿದ್ದಾರೆ.

ಇದಲ್ಲದೆ ಇಂಡಿ-ಚಡಚಣ ಭಾಗದ ರೈತರ ಮಹತ್ವಾಕಾಂಕ್ಷೆಯ ಹೊರ್ತಿ ಶ್ರೀರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಯ ಮೊದಲ ಹಂತದ ಕಾಮಗಾರಿಗೆ ಕರೆದಿರುವ ಟೆಂಡರ್ ನಿಧಾನಗತಿಯಲ್ಲಿ ನಡೆದಿದೆ. 2-3ನೇ ಹಂತದ ಕಾಮಗಾರಿಗೆ ಸಮಗ್ರ ಯೋಜನಾ ವರದಿ ರೂಪಿಸಿ, ಕೆಬಿಜೆ-ಎನ್‌ಎಲ್ ಮಂಡಳಿಯಲ್ಲಿ ತುರ್ತಾಗಿ ಒಪ್ಪಿಗೆ ಪಡೆಯಬೇಕು ಎಂಬ ಬೇಡಿಕೆಗೆ ಸಿಎಂ ಸಕಾರಾತ್ಮಕ ಸ್ಪಂದನೆ ನೀಡಿದ್ದಾರೆ.

> ಇಂಡಿ ಮತಕ್ಷೇತ್ರದಲ್ಲಿರುವ ಸಣ್ಣ ನೀರಾವರಿ ಇಲಾಖೆಗೆ ಸೇರಿದ 19 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಕಾಮಗಾರಿಯನ್ನು ಜಾರಿಗೊಳಿಸಬೇಕು. ಹಂಜಗಿ, ಅರ್ಜನಾಳ, ಗೂಗಿಹಾಳ, ಲೋಣಿ ಕೆ.ಡಿ. ಕೆರೆಗಳಿಗೆ ನೀರು ತುಂಬಿಸಬೇಕು. ಜಿಲ್ಲೆಯಲ್ಲಿ ಭೀಕರ ಬರ ಆವರಿಸಿದ್ದು, ಇಂಡಿ, ಸಿಂದಗಿ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಮಹಾರಾಷ್ಟ್ರ ಸರ್ಕಾರದೊಂದಿಗೆ ಮಾತನಾಡಿ ಭೀಮಾ ನದಿಗೆ ಉಜನಿ ಜಲಾಶಯದಿಂದ ನೀರು ಹರಿಸಲು ಕ್ರಮ ಕೈಗೊಳ್ಳಬೇಕು. ಪ್ರಸಕ್ತ ವರ್ಷ ಭೀಕರ ಬರದ ಹಿನ್ನೆಲೆಯಲ್ಲಿ ಕೃಷಿ-ತೋಟಗಾರಿಕೆ ಬೆಳೆ ಹಾನಿಗೆ ಇನ್‌ಪುಟ್ ಸಬ್ಸಿಡಿ ಹಾಗೂ ಹಾನಿಯ ಪರಿಹಾರ ನೀಡಬೇಕು, ಜಲಧಾರೆ ಯೋಜನೆ ಕಾಮಗಾರಿ ತ್ವರಿತಗೊಳಿಸುವುದು ಸೇರಿದಂತೆ ಇತರೆ ಬೇಡಿಕೆಗೆ ಮುಖ್ಯಮಂತ್ರಿಗಳು ಸೈ ಎಂದಿದ್ದಾರೆ ಎಂದು ಶಾಸಕ ಯಶವಂತ್ರಾಯಗೌಡ ಪಾಟೀಲ ತಿಳಿಸಿದ್ದಾರೆ.

### ರಾಜ ನುಡಿ

ಜಾಗೃತ ಸ್ಥಿತಿಯಲ್ಲಿರುವ ಮಿದುಳಿಂದ ಒಂದು ವಿದ್ಯುತ್ ಬಲ್ಬನ್ನು ಬೆಳಗಿಸುವಷ್ಟು ವಿದ್ಯುತ್ ಪ್ರಸರಣ ಮನುಷ್ಯನ ಮಿದುಳಲ್ಲಿರುತ್ತದಂತೆ. ಇಂತಹ ಮಿದುಳಿಂದ ಇನ್ನೊಬ್ಬರ ಜೀವನವನ್ನು ಬೆಳಗುವಂತಹ ಆಲೋಚನೆಗಳನ್ನೇ ಮಾಡೋಣ. ಅಲ್ವಾ!.

-ಡಾ. ರಾಜಶೇಖರ ನಾಗೂರ

ಉದಯರಶ್ಮಿ' ಪತ್ರಿಕೆಯಲ್ಲಿ ಪ್ರಕಟಗೊಂಡ ವರದಿಗೆ ಸ್ಪಂದಿಸಿದ ಅಧಿಕಾರಿಗಳು

# ರಸ್ತೆ ದುರಸ್ತಿಗೆ ಮುಂದಾದ ಲೋಕೋಪಯೋಗಿ ಅಧಿಕಾರಿಗಳು


ಉದಯರಶ್ಮಿ ನ್ಯೂಸ್



ಬಸವನಬಾಗೇವಾಡಿ: ತಾಲೂಕಿನ ಇಂಗಳೇಶ್ವರ ಗ್ರಾಮದ ಬೀರಲಿಂಗೇಶ್ವರ ಬಡಾವಣೆ ಹತ್ತಿರ ಇರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಂಭಾಗ ಹಾಯ್ದು ಹೋಗುವ ಇಂಗಳೇಶ್ವರ-ಬಸವನಬಾಗೇವಾಡಿ ಪ್ರಮುಖ ರಸ್ತೆಯು ಹದಗೆಟ್ಟು ಹೋಗಿ ಅಲ್ಲಲ್ಲಿ ಗುಂಡಿಗಳು ನಿರ್ಮಾಣವಾಗಿ ನೀರು ನಿಂತಿರುವದರಿಂದಾಗಿ ಶಾಲಾ ಮಕ್ಕಳಿಗೆ, ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಮುಂದೆ ಅಪಘಾತಗಳಾಗುವ ಮುನ್ನವೇ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕೆಂದು ರೈತ ಸಂಘದ ಮುಖಂಡ ಅರವಿಂದ ಕುಲಕರ್ಣಿ ಪತ್ರಿಕಾ ಪ್ರಕಟಣೆ ಮೂಲಕ ಹದಗೆಟ್ಟ ರಸ್ತೆ ದುರಸ್ತಿಗೆ ಶುಕ್ರವಾರ ಆಗ್ರಹಿಸಿದ್ದರು.

ಈ ಪತ್ರಿಕಾ ಪ್ರಕಟಣೆಯು ಶನಿವಾರದ "ಉದಯರಶ್ಮಿ" ಪತ್ರಿಕೆಯಲ್ಲಿ ಪ್ರಕಟಗೊಂಡಿತ್ತು. ಇವರ ಪ್ರಕಟಣೆಗೆ ಸ್ಪಂದಿಸಿದ "ಉದಯರಶ್ಮಿ" ಪತ್ರಿಕೆಯಲ್ಲಿ ಪ್ರಕಟಗೊಂಡಿತ್ತು. ಇದಕ್ಕೆ ಸ್ಪಂದಿಸಿದ ಲೋಕೋಪಯೋಗಿ ಅಧಿಕಾರಿಗಳು ಶನಿವಾರ ಈ ರಸ್ತೆಗೆ ಕಡಿ ಹಾಕಿ ದುರಸ್ತಿ ಮಾಡುವ ಕಾರ್ಯಕ್ಕೆ ಮುಂದಾಗಿರುವುದು ರೈತ ಮುಖಂಡ ಅರವಿಂದ ಕುಲಕರ್ಣಿ ಅವರ ಸಾರ್ವಜನಿಕ ಸೇವೆಗೆ ಜನರು ಶ್ಲಾಘಿಸಿದರು.

### ವಚನ ಚಿಂತನ 233



ಪ್ರಣವ ನಾದೊತ್ಪತ್ತಿ

*ಆದಿ ಅನಾದಿಗಳಿಲ್ಲದಂದಿನ ಕೂಗು;*
*ನಾದ ಬಿಂದುಗಳಿಲ್ಲದಂದಿನ ಕೂಗ ಕಂಡು ಕೂಗಿದೆ !*
*ಇಡಾ ಪಿಂಗಳ ಸುಷುಮ್ನನಾಳಮಧ್ಯದ ಕೂಗ ಕಂಡು ಕೂಗಿದೆ.*
*ಗುಹೇಶ್ವರನೆಂಬ ತಲೆವೊಲನ ದಾಂಟಿ ಅಲ್ಲಮ ಕೂಗಿದ ಕೂಗು*
*– ಅಲ್ಲಮಪ್ರಭುಗಳು*


ಸೃಷ್ಟಿಯ ಉಗಮದ ಮಹಾಸ್ಫೋಟ ಕಾಲದಲ್ಲಿ ಹೊರಹೊಮ್ಮಿದ ಶಬ್ದವೇ ಪ್ರಣವ(ಓಂಕಾರ) ನಾದ. ಇದರ ಸ್ವರೂಪ ಕುರಿತು ಅಲ್ಲಮರು ಈ ವಚನದಲ್ಲಿ ವಿವರಿಸಿದ್ದಾರೆ. ಅಂದು ಬ್ರಹ್ಮಾಂಡದಲ್ಲಿ ಹೊರಹೊಮ್ಮಿದ ನಾದವೇ ಇಂದು ಸಹ ಖಗೋಳದಲ್ಲಿ ಪ್ರತಿಧ್ವನಿಸುತ್ತಿರುವುದನ್ನು ನಾಸಾ ವಿಜ್ಞಾನಿಗಳು ಗುರುತಿಸಿದ್ದಾರೆ. ಮಹಾಲಿಂಗದಲ್ಲಿನ ಇದೇ ನಾದವೆ ನಮ್ಮ (ಪ್ರಾಣಲಿಂಗ) ಕಾಯದಲ್ಲಿನ ಇಡಾ, ಪಿಂಗಳ, ಸುಷುಮ್ನನಾಳದಲ್ಲಿ ಪ್ರಾಣ ರೂಪದಲ್ಲಿ ಪ್ರವಹಿಸುತ್ತಿದೆ. ಇದೇ ನಾದವನ್ನು ಅಲ್ಲಮರು ಗುರ್ತಿಸಿರುವುದಾಗಿ ವಚನದಲ್ಲಿ ತಿಳಿಸಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

ಸುವರ್ಣ ಕರ್ನಾಟಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಾಸಕ ಅಶೋಕ ಮನಗೂಳಿ ಅಭಿಮತ

# ಮಾನವೀಯತೆ-ಜೀವನ ಮೌಲ್ಯ ಕಲಿಸುವ ಕನ್ನಡ ಭಾಷೆ

ಉದಯರಶ್ಮಿ ನ್ಯೂಸ್



ಸಿಂದಗಿ: ಆಂಗ್ಲ ಭಾಷೆಯ ವ್ಯಾಮೋಹದಿಂದಾಗಿ ಜಗತ್ತಿಗೆ ಸಮಾನತೆ, ಮಾನವೀಯತೆ ಹಾಗೂ ಶ್ರೇಷ್ಠ ಜೀವನ ಮೌಲ್ಯವನ್ನು ಕಲಿಸಿಕೊಟ್ಟ ಕನ್ನಡ ಭಾಷೆಯ ಮೇಲಿನ ಪ್ರೀತಿ ಮತ್ತು ಮೆರಗು ಕಡಿಮೆಯಾಗುತ್ತಿದೆ ಎಂದು ಶಾಸಕ ಅಶೋಕ ಮನಗೂಳಿ ಕಳವಳ ವ್ಯಕ್ತಪಡಿಸಿದರು.

ಪಟ್ಟಣದ ಜ್ಯೋತಿ ನಗರದ ಜ್ಯೋತಿ ಕಲ್ಯಾಣ ಮಂಟಪದಲ್ಲಿ ನಬಿರೋಶನ ಪ್ರಕಾಶನ್ ಬೋರಗಿ, ಮಂದಾರ ಪ್ರತಿಷ್ಠಾನ ಹಾಗೂ ಆಲಮೇಲ ಶಾಫಿಯಾ ಪ್ರಕಾಶನ ಶನಿವಾರ ಹಮ್ಮಿಕೊಂಡ ಕನ್ನಡ ರಾಜ್ಯೋತ್ಸವ ಹಾಗೂ ಸುವರ್ಣ ಕರ್ನಾಟಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು ಪ್ರತಿಯೊಬ್ಬ ಕನ್ನಡಿಗನಿಗೂ ಕನ್ನಡದ ಮೇಲೆ, ಅಭಿಮಾನ ಮೂಡಿದಾಗ ಮಾತ್ರ ಕನ್ನಡ ಭಾಷೆ ಉಚ್ಛ್ರಾಯ ಸ್ಥಿತಿಗೆ ತಲುಪಲು ಸಾಧ್ಯ ಎಂದು ಹೇಳಿದರು.

ಈ ವೇಳೆ ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ ಮಾತನಾಡಿ ಕನ್ನಡ ಸಾಹಿತ್ಯ ಮತ್ತು ಭಾಷೆಗೆ ತನ್ನದೆಯಾದ ಸಂಪತ್ಭರಿತ ಸಾಂಸ್ಕೃತಿಕ ಇತಿಹಾಸ ಹೊಂದಿದೆ ಹೀಗಾಗಿಯೇ ಕನ್ನಡ ಭಾಷೆಗೆ ಎಂಟು ಜ್ಞಾನಪೀಠ ಪ್ರಶಸ್ತಿ ದೊರೆತಿವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಮಕ್ಕಳ ಸಾಹಿತಿ ಪ.ಗು ಸಿದ್ಧಾಪುರ ಮಾತನಾಡಿ, ಶರಣರು ಕೂಡಾ ದೇವರಿಗೆ ಕನ್ನಡವನ್ನು ಕಲಿಸಿದ್ದಾರೆ, ಕನ್ನಡ ಎನ್ನುವುದು ಸ್ವತಂತ್ರ ಭಾಷೆ ಸ್ವತಂತ್ರ ಲಿಪಿ ಹೊಂದಿರುವ ಈ ಭಾಷೆ ಸೂರ್ಯ ಚಂದ್ರ ಇರುವವರೆಗೂ ನಾಶ ಎಂಬುದಿಲ್ಲ. ಗಡಿಯಾಚೆ ಕಡಲಾಚೆ ಎಲ್ಲ ದೇಶಗಳಲ್ಲಿಯೂ ತನ್ನದೇ ಆದ ಸ್ಥಾನಮಾನವನ್ನು ಉಳಿಸಿಕೊಂಡಿದೆ. ಜೊತೆಗೆ ಮೌಲಾಲಿ ಆಲಗೂರ ಅವರಂತಹ ಕವಿಗಳು ಕನ್ನಡವನ್ನು ನಾಡಿನ ಉದ್ದಗಲಕ್ಕೂ ಬೆಳೆಸಲು ಪ್ರಯತ್ನಿಸಲಿ ಎಂದು ಹೇಳಿದರು

ಇದೇ ಸಂದರ್ಭದಲ್ಲಿ ತಾಲೂಕು ಕಸಾಪ ನಿಕಟಪೂರ್ವ ತಾಲೂಕಾಧ್ಯಕ್ಷ ಸಿದ್ಧಲಿಂಗ ಚೌಧರಿ ಪ್ರಾಸ್ತಾವಿಕ ಮಾತನಾಡಿದರು.

ಇದೇ ವೇಳೆ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಸುವರ್ಣ ಕರ್ನಾಟಕ ಪುರಸ್ಕಾರ ನೀಡಿ ಗೌರವಿಸಲಾಯಿತು. ಇದೇ ವೇಳೆ 25ಕ್ಕೂ ಅಧಿಕ ಕವಿಗಳು ತಮ್ಮ ಕವನ ವಾಚಿಸಿದರು.

ವೇದಿಕೆಯ ಮೇಲೆ ಸಿಂದಗಿ ವೃತ್ತ ಪೊಲೀಸ್ ನಿರೀಕ್ಷಕ ಡಿ.ಹುಲುಗಪ್ಪ, ಆರಕ್ಷಕ ಮೌಲಾಲಿ ಆಲಗೂರ, ಡಾ.ಸಮೀರ ಹಾದಿಮನಿ, ಮಡಿವಾಳಪ್ಪ ಪಾಟೀಲ್, ಶಕುಂತಲಾ ಹಿರೇಮಠ, ನಬಿ ಆಲಗೂರ, ನಬಿ ಸೊನ್ನೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಜಿ.ಪಿ. ಬಿರಾದಾರ ಸ್ವಾಗತಿಸಿದರು. ಬಸವರಾಜ ಅಗಸರ ವಂದಿಸಿದರು.

# ರೋಗಶಾಸ್ತ್ರಜ್ಞರು ಜಾಣ ವೈದ್ಯರು :ಡಾ.ಕೋಟೆಣ್ಣವರ

ಉದಯರಶ್ಮಿ ನ್ಯೂಸ್



ವಿಜಯಪುರ: ರೋಗಶಾಸ್ತ್ರಜ್ಞರು ವೈದ್ಯರಲ್ಲಿಯೇ ಜಾಣ ವೈದ್ಯರಾಗಿದ್ದಾರೆ ಎಂದು ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರದ ಶಸ್ತ್ರಚಿಕಿತ್ಸೆ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ ಕೋಟೆಣ್ಣವರ ಹೇಳಿದ್ದಾರೆ.

ಬುಧವಾರ ವೈದ್ಯಕೀಯ ಮಹಾವಿದ್ಯಾಲಯದ ವೈದ್ಯಕೀಯ ಶಿಕ್ಷಣ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ವಿಶ್ವ ರೋಗನಿರ್ಣಯ ಶಾಸ್ತ್ರ ದಿನಾಚರಣೆ ಉದ್ಘಾಟಿಸಿ ಅವರು ಅವರು ಹೇಳಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಧಾರವಾಡದ ಎಸ್. ಡಿ. ಎಂ ವೈದ್ಯಕೀಯ ಮಹಾವಿದ್ಯಾಲಯದ ಹಿಮೆಟೊಆಂಕಾಲಜಿ ವಿಭಾಗದ ಪ್ರಾಧ್ಯಾಪಕ ಡಾ. ಗಿರೀಶ ಕಾಮತ ಮಾತನಾಡಿ ನಾನಾ ರಕ್ತ ಕಣಗಳ ಕ್ಷೀಣಿಸುವಿಕೆ(ಪ್ಯಾನ್ಸೈಟೊಪೀನಿಯಾ) ಮತ್ತು ಹವಾಮಾನ ವೈಪರೀತ್ಯದ ಜೊತೆ ಅದರ ಸಂಬಂಧದ ಕುರಿತು ವಿವರಿಸಿದರು.

ರೋಗಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಸುರೇಖಾ ಹಿಪ್ಪರಗಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಸ್ನೇಹಾ.ಜವಳಕರ ವಂದಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಉಪಪ್ರಾಚಾರ್ಯ ಡಾ. ಎಂ. ಬಿ.ಪಾಟೀಲ, ಹಿರಿಯ ವಿಜ್ಞಾನಿ ಡಾ. ಕುಶಾಲ ದಾಸ, ಪ್ರಾಧ್ಯಾಪಕರಾದ ಡಾ. ತೇಜಸ್ವಿನಿ.ವಲ್ಲಭ, ಡಾ. ಸುರೇಖಾ. ಅರಕೇರಿ, ಡಾ. ಪ್ರಕಾಶ.ಪಾಟೀಲ, ಡಾ. ಸತೀಶ.ಅರಕೇರಿ, ಡಾ. ಸಾವಿತ್ರಿ. ನೆರೂನೆ, ಡಾ. ಸಾಯಿ.ಕುಲಕರ್ಣಿ, ಸ್ನಾತಕ ಮತ್ತು ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಂಗವಾಗಿ ಆಯೋಜಿಸಲಾಗಿದ್ದ ನಿಬಂಧ, ರಸಪ್ರಶ್ನೆ, ಕಲಾರಚನೆಗಳಲ್ಲಿ ವಿಜೇತರಾದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಈ ಸಂದರ್ಭದಲ್ಲಿ ಬಹುಮಾನ ವಿತ–ರಿಸಲಾಯಿತು.

# ರಿಲಯನ್ಸ್ ರಿಟೇಲ್‌ನ ಯುಸ್ಟಾ ವಿಜಯಪುರದಲ್ಲಿ ಪ್ರಾರಂಭ

ಉದಯರಶ್ಮಿ ನ್ಯೂಸ್




ವಿಜಯಪುರ: ಭಾರತದ ಮುಂಚೂಣಿಯ ರೀಟೈಲ್ ದೈತ್ಯ ರಿಲಯನ್ಸ್ ರೀಟೇಲ್ ಕರ್ನಾಟಕದ ಲಿಂಗದಗುಡಿ ರಸ್ತೆಯಲ್ಲಿ ತನ್ನ ಯುಸ್ಟಾ ಮಳಿಗೆಯನ್ನು ಪ್ರಾರಂಭಿಸಿದೆ. ತೆಲಂಗಾಣ, ಛತ್ತೀಸಗಢ, ಕೇರಳ ಮತ್ತು ಮಹಾರಾಷ್ಟ್ರಗಳಿಗೆ ಪ್ರವೇಶಿಸಿದ ನಂತರ ರಿಲಯನ್ಸ್ ರೀಟೇಲ್ ನ ಯುವಜನರ ಕೇಂದ್ರಿತ ಫ್ಯಾಷನ್ ಬ್ರಾಂಡ್ ಈಗ ಕರ್ನಾಟಕ ರಾಜ್ಯಕ್ಕೂ ತನ್ನ ಪ್ರವೇಶ ಮಾಡಿದೆ.

ಯುಸ್ಟಾ ಆಗಸ್ಟ್ ತಿಂಗಳಲ್ಲಿ ಪ್ರಾರಂಭವಾದ ದಿನದಿಂದಲೂ ಭಾರತದಲ್ಲಿ ತನ್ನ ವ್ಯಾಪ್ತಿಯನ್ನು ವಿಸ್ತ–ರಿಸುತ್ತಾ ಬಂದಿದೆ. ಈ ಬ್ರಾಂಡ್ ಯುವ ಗ್ರಾಹಕರಿಗೆ ಟ್ರೆಂಡಿ ಮತ್ತು ಕೈಗೆಟುಕುವ ಫ್ಯಾಷನ್ ತಂದಿದೆ. ಯುಸ್ಟಾ ವಿಸ್ತಾರ ಶ್ರೇಣಿಯ ಫ್ಯಾಷನಬಲ್ ಉಡುಪುಗಳ ಆಕರ್ಷಕ ಮತ್ತು ಕೈಗೆಟುಕುವ ಖರೀದಿ ಅನುಭವ ನೀಡುತ್ತದೆ, ಎಲ್ಲ ಉತ್ಪನ್ನಗಳೂ ರೂ.999ಕ್ಕಿಂತ ಕಡಿಮೆ ಬೆಲೆ ಹೊಂದಿವೆ ಮತ್ತು ಬಹಳಷ್ಟು ಉತ್ಪನ್ನಗಳು ರೂ.499ಕ್ಕಿಂತ ಕಡಿಮೆ ಬೆಲೆಯಲ್ಲಿ ಲಭ್ಯ.

ಈ ವಿಜಯಪುರದ ಮಳಿಗೆಯು ಅಡಿಯಿಂದ ಮುಡಿಯವರೆಗೆ ದಿರಿಸುಗಳು, ಯೂನಿಸೆಕ್ಸ್ ಮತ್ತು ಕ್ಯಾರೆಕ್ಟರ್ ಮರ್ಕೆಂಡೈಸ್ ಮತ್ತು ಯುಸ್ಟಾದ ವಿಶೇಷ "ಸ್ಟಾರಿಂಗ್ ನೌ" ಸಂಗ್ರಹದಿಂದ ವಾರದ ಹೊಸ ಫ್ಯಾಷನ್ ಡ್ರಾಪ್ಸ್ ಒಳಗೊಂಡಿದೆ.

ಈ ಮಳಿಗೆಯು ಸಮಕಾಲೀನ ಮತ್ತು ತಂತ್ರಜ್ಞಾನ–ಸನ್ನದ್ಧ ಖರೀದಿ ಅನುಭವವನ್ನು ಅನುಕೂಲಕರ ಟೆಕ್ ಟಚ್ ಪಾಯಿಂಟ್‌ಗಳನ್ನು ನೀಡುತ್ತಿದ್ದು ಅದರಲ್ಲಿ ತಡೆರಹಿತ ಮಾಹಿತಿ ಲಭ್ಯತೆಗೆ ಕ್ಯೂಆರ್ ಕೋಡ್‌ಗಳು, ತ್ವರಿತ ವಹಿವಾಟಿಗೆ ಸೆಲ್ಫ್–ಚೆಕೌಟ್ ಕೌಂಟ–ರ್‌ಗಳು ಮತ್ತು ಡಿವೈಸ್‌ಗಳಿಗೆ ಚಾ–ರ್ಜಿಂಗ್ ಸ್ಟೇಷನ್‌ಗಳನ್ನು ಹೊಂದಿದೆ.

ಕೈಗೆಟುಕುವ ಮತ್ತು ಟ್ರೆಂಡಿ ಫ್ಯಾಷನ್ ನೊಂದಿಗೆ ಯುಸ್ಟಾ ಸಮುದಾಯಕ್ಕೆ ಹಿಂದಕ್ಕೆ ನೀಡುವುದಕ್ಕೆ ಬದ್ಧವಾಗಿದೆ. ಈ ಮಳಿಗೆಯು ಗ್ರಾಹಕ–ರಿಗೆ ಬಟ್ಟೆಗಳನ್ನು ದೇಣಿಗೆ ನೀಡಲು ನೆರವಾಗುತ್ತದೆ ಅದನ್ನು ಸಮುದಾಯ ಕಾರ್ಯಕ್ರಮಗಳಿಗೆ ಬಳಸಲಾಗುತ್ತದೆ. ಈ ಉಪಕ್ರಮವು ನೀಡುವ ಸಂಸ್ಕೃತಿಯನ್ನು ಉತ್ತೇಜಿಸುತ್ತದೆ ಮತ್ತು ಪರಿಸರ ಸ್ನೇಹಿ ವಿಧಾನದಲ್ಲಿ ಬಳಸಬಲ್ಲ ಉಡುಪುಗಳ ಜೀವಿತಾವಧಿ ಹೆಚ್ಚಿಸುತ್ತದೆ.

ಗ್ರಾಹಕರು ಯುಸ್ಟಾದಿಂದ ಹೆಚ್ಚು ಅಪ್ಡೇಟ್‌ಗಳಿಗೆ ಇನ್ಸ್ ಟಾಗ್ರಾಂ ಹ್ಯಾಂಡಲ್@youstafashion ಅನುಸರಿಸಿ. ಯುಸ್ಟಾ ಫ್ಯಾಷನ್ ಸಂಗ್ರಹವನ್ನು ವಿಜಯಪುರದ ಮಳಿಗೆಯನ್ನು ಕಾಣಬಹುದು ಮತ್ತು ಅಜಿಯೊ ಮತ್ತು ಜಿಯೊಮಾರ್ಟ್ ಪ್ಲಾಟ್‌ಫಾರಂಗಳಲ್ಲಿ ಆನ್ಲೈನ್‌ನಲ್ಲಿ ಕೂಡಾ ಖರೀದಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ನ.14 ರಿಂದ ಲಿಂ.ಚೆನ್ನವೀರ ಶ್ರೀಗಳ ಜಯಂತ್ಯೋತ್ಸವ

ಉದಯರಶ್ಮಿ ನ್ಯೂಸ್



ಸಿಂದಗಿ: ಪಟ್ಟಣದ ಸಾರಂಗಮಠದ ಪೂಜ್ಯ ಶ್ರೀ ಲಿಂ. ಚೆನ್ನವೀರ ಸ್ವಾಮೀಜಿ ಪ್ರತಿಷ್ಠಾನದ ವತಿಯಿಂದ ಲಿಂ.ಚೆನ್ನವೀರ ಸ್ವಾಮಿಗಳ 130ನೆಯ ಜಯಂತಿ ಹಾಗೂ ಶಿವಶರಣೆಯರ ಚರಿತಾಮೃತ ಪ್ರವಚನ ನ.14 ರಿಂದ ಡಿ.19ರ ವರೆಗೆ ಪ್ರತಿದಿನ ಸಾಯಂಕಾಲ 6.30 ಗಂಟೆಗೆ ಸಾರಂಗಮಠದಲ್ಲಿ ಜರುಗಲಿದೆ ಎಂದು ಸಾರಂಗಮಠದ ಡಾ.ಪ್ರಭು ಸಾರಂಗದೇವ ಶಿವಾಚಾರ್ಯರು ಹೇಳಿದರು.

ಪಟ್ಟಣದ ಸಾರಂಗಮಠದಲ್ಲಿ ಹಮ್ಮಿಕೊಂಡ ಪತ್ರಿಕಾ ಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ನ.14 ರಂದು ಪ್ರವಚನದ ಉದ್ಘಾಟನೆ ನಡೆಯಲಿದೆ. ಪ್ರವಚನಕಾರರಾಗಿ ನಿವೃತ್ತ ಪ್ರಾಧ್ಯಾಪಕ ಬಿ.ಎನ್.ಪಾಟೀಲ ಆಗಮಿಸಲಿದ್ದಾರೆ. ನ.18 ರಂದು ಲಿಂ. ಚೆನ್ನವೀರ ಸ್ವಾಮಿಗಳ 130ನೆಯ ಜಯಂತಿ ಜರುಗಲಿದೆ. ನ.20 ರಂದು ಇಸ್ರೋ ಮಾಜಿ ಅಧ್ಯಕ್ಷ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ.ಕಿರಣಕುಮಾರ ಅವರಿಗೆ ಭಾಸ್ಕರ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ನಡೆಯಲಿದೆ. ಈ ವೇಳೆ ಕೋಣ್ಣೂ–ರಿನ ಹೊರಗಿನ ಕಲ್ಯಾಣಮಠದ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು, ಊರಿನ ಹಿರಿಯ ಮಠದ ಶ್ರೀ ಶಿವಾನಂದ ಶಿವಾಚಾರ್ಯರು, ಶಾಸಕ ಅಶೋಕ ಮನಗೂಳಿ, ಮಾಜಿ ಶಾಸಕ ರಮೇಶ ಭೂಸನೂರ, ಮಾಜಿ ವಿಪ ಸದಸ್ಯ ಅರುಣ ಶಹಾಪೂರ, ನವದೆಹಲಿಯ ಭಾರತದ ಟಾಪ್ ಟೆನ್ ಅಂತರಾಷ್ಟ್ರೀಯ ಫೈನ್ ಆರ್ಟ ಕಲಾವಿದ ಈರಣ್ಣ ರುಕುಂಪೂರ ಭಾಗವಹಿಸಲಿದ್ದಾರೆ. ನ.23 ರಂದು ಪ್ರಗತಿ ಪರ ರೈತ ಗೊರವಗುಂಡಗಿಯ ಗುರುಬಸಪ್ಪ ಯಲಗೋಡ ಅವ–ರಿಗೆ ಸಾರಂಗಶ್ರೀ ಕೃಷಿ ಪ್ರಶಸ್ತಿ ಪ್ರದಾನ ಜರುಗಲಿದೆ. ಡಿ.17ರಂದು ಶ್ರೀಮಠದಲ್ಲಿ ಅಯ್ಯಾಚಾರ ಹಾಗೂ ಲಿಂಗದೀಕ್ಷೆ ಜರುಗಲಿದೆ. ಡಿ.18 ರಂದು ಶ್ರೀ ಶಿವಯೋಗಿ ಶಿವಾಚಾರ್ಯ ರಾಷ್ಟ್ರೀಯ ಪ್ರಶಸ್ತಿಯನ್ನು ಶ್ರೀಶೈಲದ ಶ್ರೀ ಮಲ್ಲಿಕಾರ್ಜುನ ಸಮಾಜೋತ್ಥಾನ ಫೌಂಡೇಶನ್ ಟ್ರಸ್ಟ್ ಅವರಿಗೆ ಪ್ರದಾನ ಮಾಡಲಾಗುವುದು. ಈ ವೇಳೆ ಶ್ರೀಶೈಲದ ಪೂಜ್ಯ ಶ್ರೀ ಡಾ.ಚೆನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯರು ಸಾನಿಧ್ಯ ವಹಿಸಲಿದ್ದಾರೆ. ಡಿ.19 ರಂದು ಬೆಳಗ್ಗೆ 11 ಗಂಟೆಗೆ ಮಹಾಪ್ರಸಾದ ಮತ್ತು ಮಧ್ಯಾಹ್ನ 2 ಗಂಟೆಗೆ ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಭದ್ರಕಾಳಿ ಅಮ್ಮನವರ ಜಾತ್ರಾ ಮಹೋತ್ಸವವು ಮಹಿಳೆಯರು ಬೆಳ್ಳಿತೇರನ್ನು ಎಳೆಯುವ ಮುಖೇನ ಜರುಗಲಿದೆ. ಈ ಕಾರ್ಯಕ್ರಮದಲ್ಲಿ ನಾಡಿನ ಅನೇಕ ಹರಗುರು ಚರಮೂರ್ತಿಗಳು ಬಾಗವಹಿಸಲಿದ್ದಾರೆ ಎಂದರು.

ಪತ್ರಿಕಾ ಗೋಷ್ಠಿಯಲ್ಲಿ ಶಾಸಕ ಅಶೋಕ ಮನಗೂಳಿ, ಸಂಚಾಲಕ ವ್ಹಿ.ಡಿ.ವಸ್ತ್ರದ, ನೆಹರು ಪೋರವಾಲ, ಹ.ಮ.ಪೂಜಾರ, ಗಂಗಾಧರ ಜೋಗೂರ, ಅಶೋಕ ಮಸಳಿ, ಡಾ.ಬಿ.ಜಿ.ಮಠ, ಡಾ.ವ್ಹಿ.ವ್ಹಿ.ಸಾಲಿಮಠ, ಪ್ರಾಚಾರ್ಯ ವ್ಹಿ.ಡಿ.ಪಾಟೀಲ, ಪ್ರಾಚಾರ್ಯ ಜೆ.ಸಿ.ನಂದಿಕೋಲ, ಎಸ್.ಎಮ್.ಬಿರಾದಾರ, ಶ್ರೀಶೈಲ ನಂದಿಕೋಲ, ಮುತ್ತು ಮುಂಡೇವಾಡಗಿ, ಕೆ.ಎಚ್.ಸೋಮಾಪೂರ, ವಿಶ್ವನಾಥ ನಂದಿಕೋಲ, ವಿರೇಶ ಜೋಗೂರ, ಶಿವಕುಮಾರ ಜೋಗೂರ ಸೇರಿದಂತೆ ಅನೇಕರಿದ್ದರು.

# ಒನಕೆ ಓಬವ್ವ ಸಾಹಸಗಾಥೆ ಅಜರಾಮರ :ಹಿರೇಮಠ



ಉದಯರಶ್ಮಿ ನ್ಯೂಸ್

ಸಿಂದಗಿ: ಇತಿಹಾಸದ ಪುಟದಲ್ಲಿ ಅಚ್ಚಳಿಯದೇ ಉಳಿದಿರುವ ಐತಿಹಾಸಿಕ ಸ್ಥಳಗಳಲ್ಲಿ ಚಿತ್ರದುರ್ಗವೂ ಒಂದು ಎಂದು ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ ಹೇಳಿದರು.

ಪಟ್ಟಣದ ಆಡಳಿತ ಸೌಧದಲ್ಲಿ ಹಮ್ಮಿಕೊಂಡ ವೀರ ವನಿತೆ ಒಬವ್ವ ಜಯಂತಿ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಚಿತ್ರದುರ್ಗ ಎಂದಾ ಕ್ಷಣ ನೆನಪಾಗುವುದೇ ಹೈದರಾಲಿಯ ಸೈನ್ಯದೊಂದಿಗೆ ಏಕಾಂಗಿಯಾಗಿ ಹೋರಾಡಿದ ವೀರವನಿತೆ ಒನಕೆ ಓಬವ್ವ. ಆಕೆಯ ಸಾಹಸದ ಕತೆ ಎಂದಿಗೂ ಅಜರಾಮರ. ಅಂತಹ ಧೀರ ಮಹಿಳೆ ಜನಿಸಿದ ನಾಡಿನಲ್ಲಿ ನಾವಿರುವುದು ಬಹಳ ಹೆಮ್ಮೆಯ ವಿಚಾರ ಎಂದರು.

ಈ ವೇಳೆ ಜಿ.ಎಸ್. ರೋಡಗಿ, ಕಂದಾಯ ನಿರೀಕ್ಷಕ ಆಯ್.ಎ ಮಕಾಂದಾರ, ಮಲ್ಲಿಕಾರ್ಜುನ ಮಾಲಗಾರ, ಜಗದೀಶ ಶಹಾಪೂರ, ನಿಖಿಲಅಹ್ಮದ್ ಖಾನಾಪುರ, ನಾಗಮ್ಮ ಸಾಲಿ, ದಾನಮ್ಮ ಹೂಗಾರ, ಹೀನಾಕೌಸರ ಮಂದೇವಾಲಿ, ಸಮೀರ ಮುಜಾವರ, ಸ್ನೇಹಾ ಕೊಪ್ಪ, ವಿಜಯಲಕ್ಷ್ಮಿ ಶಹಾಪೂರ, ಭೀಮಾಶಂಕರ ಕ–ರಿಮುಂಗಿ, ಮಂಜುಳಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶಿರಾಡೋಣ ಜಾತ್ರೆ: ಭಕ್ತಿ ಭಂಡಾರದಲ್ಲಿ ಮಿಂದೆದ್ದ ಜನತೆ

ಉದಯರಶ್ಮಿ ನ್ಯೂಸ್



ಚಡಚಣ: ಸಮೀಪದ ಗಡಿನಾಡಿನ ಶಿರಾಡೋಣ ಗ್ರಾಮವು ಹಾಲುಮತ ಸುಕ್ಷೇತ್ರವೆಂದು ಪ್ರಸಿದ್ಧವಾಗಿದ್ದು, ಪ್ರತಿವರ್ಷ ದೀಪಾವಳಿಯಂದು ನಡೆವ ಜಾತ್ರೆಯಲ್ಲಿ ಭೇಟಿ ಕಾರ್ಯಕ್ರಮವು ಜರುಗುವುದು.

ಬೀರಲಿಂಗೇಶ್ವರನ ಮೂಲ ಸ್ಥಾನವಾದ ಶಿರಾಡೋಣದಲ್ಲಿ ಬೀರಲಿಂಗೇಶ್ವರ ಮತ್ತು ಶೀಲವಂತಿ ಹಾಗೂ ಹುಲಜಂತಿಯ ಮಾಳಿಂಗರಾಯ ದೇವರ ಮತ್ತು ಹುನ್ನೂರ ಬೀರಣ್ಣದೇವರ ಭೇಟಿ ಕಾರ್ಯಕ್ರಮವು ಶನಿವಾರದಂದು ಜರುಗಿತು.

ಶನಿವಾರದ ನಸುಕಿನ ಜಾವ 5 ಗಂಟೆಗೆ ಬೀರಲಿಂಗೇಶ್ವರ ಹಾಗೂ ಶೀಲದೇವಿ ದೇವರುಗಳಿಗೆ ಪೂಜಾರಿಯವರಿಂದ ಮಹಾಪೂಜೆ ಜರುಗಿತು. ನಂತರ ಭಕ್ತರಿಂದ ನೈವೇದ್ಯ ಕಾರ್ಯಕ್ರಮ ಹಾಗೂ ಭಕ್ತರಿಂದ ದೀರ್ಘದಂಡ ನಮಸ್ಕಾರವನ್ನು ಹಾಕಿ ಭಕ್ತರು ಹರಕೆ ತೀರಿಸಿದರು. ನಂತರ ವಾಲಿಬಾಲ್ ಪಂದ್ಯಾಟಗಳು ಜರುಗಿದವು.

ಸಾಯಂಕಾಲ 5 ಗಂಟೆಗೆ ವಿವಿಧ ವಾದ್ಯ ವೈಭವಗಳೊಂದಿಗೆ ದೇವರುಗಳ ಪಲ್ಲಕ್ಕಿಗಳ ಮೆರವಣಿಗೆಯೊಂದಿಗೆ ಬೀರಲಿಂಗೇಶ್ವರ, ಶೀಲವಂತಿ–ದೇವಿ, ಹುಲಜಂತಿ ಮಾಳಿಂಗರಾಯ, ಹುನ್ನೂ–ರಿನ ಬೀರಣ್ಣ ದೇವರ ಪಲ್ಲಕ್ಕಿಗಳ ಭವ್ಯ ಭಂಡಾರದೊಂದಿಗೆ ಭೇಟಿ ಕಾರ್ಯಕ್ರಮ ಜರುಗಿತು.

ಈ ವೇಳೆಯಲ್ಲಿ ಭಕ್ತಾದಿಗಳು ಭಂಡಾರ, ಉಣ್ಣೆ, ಉತ್ತತ್ತಿ ಹಾರಿಸಿ ತಮ್ಮ ಹರಕೆ ತೀರಿಸಿದರು. ಭೇಟಿಯ ನಂತರ ಮಾರಾಯರುಗಳಿಂದ ನುಡಿಮುತ್ತುಗಳು ಜರುಗಿದವು. ಇದನ್ನು ನೋಡಲು ಮಹಾರಾಷ್ಟ್ರ ಸೇ–ರಿದಂತೆ ಕರ್ನಾಟಕದ ಸಹಸ್ರಾರು ಭಕ್ತರಿದ್ದರು.

# ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆ



ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ತಾಲೂಕಿನ ನರಸಲಗಿ ಗ್ರಾಮದ ಎಂಡಿಎಸ್ಸಿ ಸಂಂ–ಯುಕ್ತ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಈಚೆಗೆ ಜರುಗಿದ ಜಿಲ್ಲಾ ಮಟ್ಟದ ಪದವಿ ಪೂರ್ವ ವಿಭಾಗದ ಅಥ್ಲೇಟಿಕ್ಸ್ ಕ್ರೀಡಾಕೂಟದಲ್ಲಿ ಭಾಗವಹಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿಕಾಸ ರಾಠೋಡ 5 ಸಾವಿರ ಮೀಟ–ರ್ ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ , ವಿಕಾಸ ರಾಠೋಡ 1500 ಮೀ.ಓಟದ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ, 4 *400 ರಿಲೆಯಲ್ಲಿ ವಿಕಾಸ, ಸಚೀನ,ದರ್ಶನ, ಚೇತನ ಪ್ರಥಮ ಸ್ಥಾನ,ಗುಡ್ಡಗಾಡು ಓಟದಲ್ಲಿ ದರ್ಶನ ಚವ್ಹಾಣ, ಹನುಮಂತ ಗುಡದಿನ್ನಿ, ಪ್ರಸನ್ನ ಅಂಬಣ್ಣೂರ ಪ್ರಥ–ಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಈ ವಿದ್ಯಾರ್ಥಿಗಳಿಗೆ ಕಾಲೇಜಿನ ಪ್ರಾಚಾರ್ಯರು, ಸಿಬ್ಬಂದಿ, ಆಡಳಿತ ಮಂಡಳಿ ಶುಭ ಹಾರೈಸಿದ್ದಾರೆ ಎಂದು ಕಾಲೇಜಿನ ಪ್ರಕಟಣೆ ತಿಳಿಸಿದೆ.

# ರಾಷ್ಟ್ರೀಯ ಶಿಕ್ಷಣ ದಿನ ಆಚರಣೆ



ಉದಯರಶ್ಮಿ ನ್ಯೂಸ್

ಢವಳಗಿ: ಗ್ರಾಮದ ಬಸವ ಬಾಲ ಭಾರತಿ ಶಾಲೆಯಲ್ಲಿ ನ.11 ಶನಿವಾರದಂದು ವೀರವನಿತೆ ಒನಕೆ ಓಬವ್ವ ಹಾಗೂ ಡಾ.ಮೌಲಾನ ಅಬ್ದುಲ್ ಕಲಾಂ ಅವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಶಿಕ್ಷಣ ದಿನವನ್ನಾಗಿ ಆಚ–ರಿಸಲಾಯಿತು.

ಶಾಲೆಯ ಮುಖ್ಯ ಗುರುಗಳಾದ ರಮೇಶ ಮೂಲಿಮನಿ, ಹರಿನಾಥ ಎನ್.ಪರಶುರಾಮ ಮೂಲಿಮನಿ, ಜೆ ಎಸ್ ಪಾಟೀಲ, ಎಸ್ ಬಿ ಬಿರಾದಾರ, ಎಸ್ ಎಸ್ ಅವಟಿ,ಹಾಗೂ ಬಿ ಬಿ ಫಾತಿಮಾ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

## ಒನಕೆ ಓಬವ್ವ ಜಯಂತಿ ಆಚರಣೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಅಭಿಮತ

# ಓಬವ್ವಳ ನಿಷ್ಠೆ, ಧೈರ್ಯ, ಆದರ್ಶ ವಿಚಾರ ಯುವಪೀಳಿಗೆ ಅರಿಯಲಿ

ಉದಯರಶ್ಮಿ ನ್ಯೂಸ್



ವಿಜಯಪುರ: ಶತ್ರುಗಳಿಂದ ಚಿತ್ರದುರ್ಗ ಕೋಟೆ ಸಾಮ್ರಾಜ್ಯವನ್ನು ರಕ್ಷಿಸುವಲ್ಲಿ ಸಾಹಸಮಯ ಧೈರ್ಯ ತೋರಿದ ಹೆಮ್ಮೆಯ ಧೀರ ಮಹಿಳೆ ಒನಕೆ ಓಬವ್ವ ಅವರ ನಿಷ್ಠೆ, ಧೈರ್ಯ, ಆತ್ಮವಿಶ್ವಾಸ, ತ್ಯಾಗಮಯವಾದ ಆದ–ರ್ಶ ವಿಚಾರ ಇಂದಿನ ಯುವಪೀಳಿಗೆ ಅರಿತುಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶನಿವಾರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಹಮ್ಮಿಕೊಂಡ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪತ್ನಿ ಧರ್ಮವನ್ನು ಅನುಸರಿಸಿದ ಓಬವ್ವ ಕೋಟೆಯನ್ನು ಸುತ್ತುವರಿದ ಶತ್ರುಗಳನ್ನು ಸಂಹರಿಸಿ,ಹಿಮ್ಮೆಟ್ಟಿಸಿದ ದಿಟ್ಟ ಮಹಿಳೆ. ಧೀರ ಮಹಿಳೆ ಓಬವ್ವ ಶೌರ್ಯದ ಸಾಧನೆ ಇತಿಹಾಸದ ಪುಟಗಳಲ್ಲಿ ಅಜರಾಮರವಾಗಿದೆ ಎಂದು ಹೇಳಿದರು.

ಡಾ. ವನಿತ ಎನ್. ತೊರವಿ ಅವರು ಉಪನ್ಯಾಸ ನೀಡಿ, ಶತ್ರು ಸೈನ್ಯವು ಚಿತ್ರದುರ್ಗದ ಕೋಟೆ ಮೇಲೆ ಹಠಾತ್ತಾಗಿ ಆಕ್ರಮಣ ಮಾಡಿದಾಗ ತನ್ನ ಒನಕೆಯನ್ನೇ ಅಸ್ತ್ರವಾಗಿಟ್ಟುಕೊಂಡು ಶತ್ರುಗಳನ್ನು ಎದುರಿಸಿ ಶೌರ್ಯ, ಸಾಹಸ ಮೆರೆದ ಧೀರ ಮಹಿಳೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಸಿ.ಬಿ.ದೇವರಮನಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ. ನಾಗರಾಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಕೆ. ಕೆ.ಚವ್ಹಾಣ, ಸುನೀಲ ಉಕ್ಕಲಿ, ಅಭಿಷೇಕ ಚಕ್ರವರ್ತಿ, ಭೀಮರಾಯ ಜಿಗಜಿಣಗಿ, ವೈ.ಎಚ್.ವಿ–ಜಯಕರ, ವಿದ್ಯಾವತಿ ಅಂಕಲಗಿ, ದೇವೇಂದ್ರ ಮಿರೇಕರ್, ಗಿರೀಶ ಕುಲಕರ್ಣಿ, ಅಡಿವೆಪ್ಪ ಸಾಲಗಲ್ಲ ಸೇ–ರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು. ಮಂಜುಳಾ ಹಿಪ್ಪರಗಿ ಸುಗಮ ಸಂಗೀತ ಪ್ರಸ್ತುತಪಡಿಸಿದರು.

ಮೆರವಣಿಗೆಗೆ ಚಾಲನೆ : ಬೆಳಿಗ್ಗೆ 9 ಗಂಟೆಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಆರಂಭಗೊಂಡ ಭಾವಚಿತ್ರ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಅವರು ಚಾಲನೆ ನೀಡಿದರು.

# ವಿಜಯೇಂದ್ರ ನೇಮಕದ ಬಗ್ಗೆ ಗೊತ್ತೇ ಇರಲಿಲ್ಲ :ಯಡಿಯೂರಪ್ಪ

**ಉದಯರಶ್ಮಿ ನ್ಯೂಸ್**

ಬೆಂಗಳೂರು: ಬಹಳ ದಿನಗಳ ನಂತರ ಪ್ರಧಾನಿ ನರೇಂದ್ರ ಮೋದಿಯವರು ರಾಜ್ಯ ಬಿಜೆಪಿಗೆ ಸಂಬಂಧಪಟ್ಟಂತೆ ಬಹಳ ಒಳ್ಳೆಯ ತೀರ್ಮಾನ ತೆಗೆದುಕೊಂಡಿದ್ದಾರೆ. ಸೂಕ್ತ ಸಮಯದಲ್ಲಿ ರಾಜ್ಯಾಧ್ಯಕ್ಷರ ನೇಮಕ ಮಾಡಿದ್ದಾರೆ. ವಿಜಯೇಂದ್ರ ನೇಮಕದ ನಿರೀಕ್ಷೆಯಿರಲಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಹೇಳಿದ್ದಾರೆ.






ಶನಿವಾರ ಬೆಂಗಳೂರಿನಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ವಿಜಯೇಂದ್ರ ನೇಮಕದ ಬಗ್ಗೆ ನನಗೆ ಗೊತ್ತೇ ಇರಲಿಲ್ಲ. ನೀವು ಯಾರನ್ನು ಬೇಕಾದರೂ ಕೇಳಿ ನೋಡಿ, ವಿಜಯೇಂದ್ರರನ್ನು ರಾಜ್ಯಾಧ್ಯಕ್ಷ ಮಾಡಿ ಎಂದು ನಾನು ಒಂದು ದಿನವೂ ದೆಹಲಿಗೆ ಹೋಗಿ ಕೇಳಿರಲಿಲ್ಲ, ಹೈಕಮಾಂಡ್ ಮುಂದೆ ಮನವಿ ಮಾಡಿರಲಿಲ್ಲ. ಹಲವು ವಿಚಾರಗಳನ್ನು ಅಳೆದು ತೂಗಿ ಹೈಕಮಾಂಡ್ ಸರಿಯಾದ ನಿರ್ಧಾರ ತೆಗೆದುಕೊಂಡಿದೆ ಎಂದು ಹೇಳಿದ್ದಾರೆ.

ವೀರಶೈವ ಲಿಂಗಾಯತ ಸಮಾಜ ನಮ್ಮ ಜೊತೆಗಿದೆ, ವಿಜಯೇಂದ್ರ ಅಧ್ಯಕ್ಷರಾದ ಮೇಲೆ ಸಮಾಜದ ಬೆಂಬಲ ಇನ್ನೂ ಹೆಚ್ಚು ಸಿಗಲಿದೆ. ಮುಂದಿನ ಬಾರಿ ಲೋಕಸಭೆ ಚುನಾವಣೆಯಲ್ಲಿ ರಾಜ್ಯದಿಂದ ಅತಿ ಹೆಚ್ಚಿನ ಸ್ಥಾನಗಳನ್ನು ಗೆಲ್ಲಿಸಿ ಅವರಿಗೆ ಒಳ್ಳೆಯ ಉಡುಗೊರೆ ಕೊಡಬೇಕೆಂಬುದು ನಮ್ಮ ಗುರಿಯಾಗಿದೆ. ಮುಂದಿನ ದಿನಗಳಲ್ಲಿ ಪಕ್ಷದ ಸಂಘಟನೆ ನಿಟ್ಟಿನಲ್ಲಿ ಇನ್ನಷ್ಟು ಕೆಲಸ ಮಾಡುವುದಾಗಿ ಯಡಿಯೂರಪ್ಪ ಹೇಳಿದರು.

# ಓಬವ್ವ ಸ್ವಾಮಿನಿಷ್ಠೆ–ತ್ಯಾಗದ ಪ್ರತೀಕ :ಬಂಡೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಒನಕೆ ಓಬವ್ವ ಸ್ವಾಮಿನಿಷ್ಠೆ, ಸಮಯ ಸ್ಫೂರ್ತಿ ಮತ್ತು ತ್ಯಾಗದ ತ್ರಿವೇಣಿ ಸಂಗಮ. ಸಾಮಾನ್ಯ ಗೃಹಿಣಿಯೊಬ್ಬಳು ಅಸಾಮಾನ್ಯ ಸಾಹಸ ತೋರಿದ ರೀತಿ ಎಲ್ಲರಿಗೂ ಪ್ರೇರಕವಾಗಿದೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.




ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡ ಒನಕೆ ಓಬವ್ವ ಜಯಂತಿ ಹಾಗೂ ಮೌಲಾನಾ ಅಬುಲ್ ಕಲಾಂ ಆಜಾದ್ ಅವರ ಜನ್ಮದಿನದ ನಿಮಿತ್ತ ರಾಷ್ಟ್ರೀಯ ಶಿಕ್ಷಣ ದಿನವನ್ನು ಉದ್ದೇಶಿಸಿ ಮಾತನಾಡಿದರು.

ಓಬವ್ವ ಉತ್ತಮ ಸಂಸ್ಕೃತಿ, ಸಂಸ್ಕಾರ ಹೊಂದಿದ್ದು, ಅವಳ ಆಚಾರ–ವಿಚಾರ, ನಡೆ–ನುಡಿಗಳ ಪರಿಶುದ್ಧತೆ ಮತ್ತು ಕಾಯಕನಿಷ್ಠೆಯ ದೃಢಸಂಕಲ್ಪ ಇಂದಿನ ಮಹಿಳೆಯರಿಗೆ ಚೇತನಶಕ್ತಿಯಾಗಿದೆ ಎಂದು ಹೇಳಿದರು.

ಮುಖ್ಯ ಶಿಕ್ಷಕ ಸುರೇಶಗೌಡ ಬಿರಾದಾರ ಮಾತನಾಡಿ, ಅಜಾದ್ ಅವರು ಭಾರತದ ಸ್ವಾತಂತ್ರ್ಯ ಚಳವಳಿಯಲ್ಲಿ ಮುಖ್ಯ ಪಾತ್ರ ವಹಿಸಿ,ಖಿಲಾಫತ್ ಚಳವಳಿಯ ಮುಂದಾಳತ್ವ ವಹಿಸಿಕೊಂಡಿದ್ದರು. ಅವರು ಶಿಕ್ಷಣ ಸಚಿವರಾಗಿದ್ದ ಸಮಯದಲ್ಲಿ'ರಾಷ್ಟ್ರೀಯ ಶಿಕ್ಷಣ ನೀತಿ' ಯನ್ನು ಜಾರಿಗೆ ತಂದಿದ್ದರು. ಪೂರ್ವ ಪ್ರಾಥಮಿಕ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿದ್ದರು ಎಂದು ಹೇಳಿದರು.

ಸಂಸ್ಥೆಯ ಅಧ್ಯಕ್ಷ ಶಂಕರ ಹುಣಶ್ಯಾಳ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಾಲೆಗಳು ದೇಶದ ಭವಿಷ್ಯದ ಪ್ರಜೆಗಳನ್ನು ಉತ್ಪಾದಿಸುವ ಪ್ರಯೋಗಾಲಯಗಳು ಎಂದು ಮೌಲಾನಾ ಆಜಾದ್ ಹೇಳಿದ್ದನ್ನು ಸ್ಮರಿಸುತ್ತಾ ಅವರ ಶೈಕ್ಷಣಿಕ ಚಿಂತನೆಗಳ ಮೇಲೆ ಬೆಳಕು ಚೆಲ್ಲುತ್ತಾ ಮಾತನಾಡಿದರು.

ಸಂಸ್ಥೆಯ ಕಾರ್ಯದರ್ಶಿ ಸುನಂದಾ ಹುಣಶ್ಯಾಳ, ಶಿಕ್ಷಕರಾದ ಎಂ ಎಸ್ ಪಾಪನಾಳಮಠ, ಜಯಶ್ರೀ ಬಂಗಾರಿ, ಬಸಮ್ಮ ವಡಗೇರಿ, ಮಧುಮತಿ ನಿಕ್ಕಂ, ರೂಪಾ ಶಹಾಪುರ, ಸರೋಜಿನಿ ಕಟ್ಟಿಮನಿ, ಭೀಮಾಶಂಕರ ಕೋರೆ, ಲಕ್ಷ್ಮೀ ಮೇತ್ರಿ, ರೇಣುಕಾ ಭಜಂತ್ರಿ, ವೀರೇಶ ಹುಣಶ್ಯಾಳ ಸೇರಿದಂತೆ ಮಕ್ಕಳು ಭಾಗವಹಿಸಿದ್ದರು.

ಮಕ್ಕಳು ಒನಕೆ ಓಬವ್ವ ಹಾಗೂ ಮೌಲಾನಾ ಆಜಾದ್ ಅವರ ವೇಷಧಾರಿಗಳಾಗಿ ಮಾತನಾಡಿದರು.

### ಮಾಜಿ ಸಿಎಂ, ಕಾಂಗ್ರೆಸ್ ಎಂಎಲ್‌ಸಿ ಜಗದೀಶ್ ಶೆಟ್ಟರ್ ಪ್ರತಿಕ್ರಿಯೆ

# ವಿಜಯೇಂದ್ರನದ್ದು ಅತ್ತೂ, ಕರೆದು ಔತಣ ಮಾಡಿಸಿಕೊಂಡ ಸ್ಥಿತಿ

**ಉದಯರಶ್ಮಿ ನ್ಯೂಸ್**

ಹುಬ್ಬಳ್ಳಿ: ಬಿಜೆಪಿ ರಾಜ್ಯಾಧ್ಯಕ್ಷ ಹುದ್ದೆಗೆ ವಿಜಯೇಂದ್ರ ಅವರ ನೇಮಕದ ಬಗ್ಗೆ ಮಾಜಿ ಸಿಎಂ, ಕಾಂಗ್ರೆಸ್ ಎಂಎಲ್‌ಸಿ ಜಗದೀಶ್ ಶೆಟ್ಟರ್ ಪ್ರತಿಕ್ರಿಯಿಸಿದ್ದು, ವಿಜಯೇಂದ್ರ ಅವರದ್ದು ಅತ್ತೂ ಕರೆದು ಔತಣ ಮಾಡಿಸಿಕೊಂಡಂತಹ ಸ್ಥಿತಿ ಎಂದು ಹೇಳಿದ್ದಾರೆ.

ಹುಬ್ಬಳ್ಳಿಯಲ್ಲಿ ಮಾತನಾಡಿದ ಮಾಜಿ ಸಿಎಂ ಜಗದೀಶ್ ಶೆಟ್ಟರ್, ವಿಧಾನಸಭಾ ಚುನಾವಣೆ ಮುಗಿದ 6 ತಿಂಗಳಿಂದ ಬಿಜೆಪಿ ರಾಜ್ಯಾಧ್ಯಕ್ಷರನ್ನು ಆಯ್ಕೆ ಮಾಡಿರಲಿಲ್ಲ. ಅತ್ತು ಕರೆದು ಅಧ್ಯಕ್ಷರನ್ನಾಗಿ ಮಾಡಿರುವ ತರಹ ಕಾಣಿಸುತ್ತಿದೆ. ಒಂದು ರಾಜಕೀಯ ಪಕ್ಷವಾಗಿ ತಕ್ಷಣ ರಾಜ್ಯಾಧ್ಯಕ್ಷರ ಆಯ್ಕೆ ಮಾಡಬೇಕಿತ್ತು. ಕಳೆದ ಆರು ತಿಂಗಳಿಂದ ಬಿಜೆಪಿ ನಾಯಕನ ಆಯ್ಕೆ ಮಾಡಿರಲಿಲ್ಲ. ಈಗ ಯಾಕೆ ಆಯ್ಕೆ ಮಾಡಿದ್ರು? ಇದನ್ನೆಲ್ಲಾ ನೋಡಿದ್ರೆ ಬಿಜೆಪಿ ಫೇಲ್ ಆಗಿದೆ. ಬಿಜೆಪಿಯವರು ಭ್ರಮೆಯಲ್ಲಿದ್ದಾರೆ ಎನ್ನುವುದು ಗೊತ್ತಾಗುತ್ತದೆ ಎಂದು ಹೇಳಿದ್ದಾರೆ.



ನಾನು ಕಾಂಗ್ರೆಸ್‌ನಲ್ಲಿ ಇದ್ದೀನಿ. ಅಧ್ಯಕ್ಷರ ಆಯ್ಕೆ ಅವರ ಪಕ್ಷಕ್ಕೆ ಬಿಟ್ಟ ವಿಚಾರ. ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ 136 ಸ್ಥಾನ ಬಂದು ಬಲಾಢ್ಯವಾಗಿ ಬೆಳೆದಿದೆ. ಬಿಜೆಪಿಯವರು ಈಗಾಗಲೇ ಬೇರೆ ರಾಜ್ಯದಲ್ಲಿ ಆಪರೇಷನ್ ಕಮಲ ಮಾಡಲು ಹೋಗಿ ಕೈ ಸುಟ್ಟುಕೊಂಡಿದ್ದಾರೆ. 50–60 ಶಾಸಕರನ್ನು ಕರೆದುಕೊಂಡು ಬಂದು ಮತ್ತೆ ಸರ್ಕಾರ ರಚನೆ ಮಾಡುವುದು ಭ್ರಮೆ. ಈಗ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾರೆ. ಪಂಚ ರಾಜ್ಯದ ಚುನಾವಣೆ ಫಲಿತಾಂಶ ಕಾಂಗ್ರೆಸ್ ಪರವಾಗಿ ಬರುತ್ತದೆ ಎಂದು ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ.



ವಿಜಯೇಂದ್ರ ಆಯ್ಕೆಯ ಬಗ್ಗೆ ಪ್ರತಿಕ್ರಿಯಿಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಕುಟುಂಬ ರಾಜಕಾರಣದ ವಿರುದ್ಧ ಮಾತನಾಡಲು ಮೋದಿಯವರು ಯಾವ ನೈತಿಕತೆಯನ್ನೂ ಉಳಿಸಿಕೊಂಡಿಲ್ಲ ಎಂದು ಹೇಳಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ದಿನೇಶ್ ಗುಂಡೂರಾವ್, ಗಾಜಿನ ಮನೆಯಲ್ಲಿ ಕುಳಿತು ಕಲ್ಲೆಸೆಯುವ ಮೊದಲು ತಾವೆಲ್ಲಿ ಕುಳಿತಿದ್ದೇವೆ ಎಂಬ ವಾಸ್ತವ ಅರಿಯಬೇಕು. ಬೇರೆಯವರು ಮಾಡಿದರೆ ಅಪರಾಧ, ತಾನು ಮಾಡಿದರೆ ಆದರ್ಶ ಎಂಬ ಭ್ರಮೆ ಒಳ್ಳೆಯದಲ್ಲ ಮೋದಿಯವರೆ ಎಂದು ಹೇಳಿದ್ದಾರೆ.

ಕುಟುಂಬ ರಾಜಕಾರಣದ ಬಗ್ಗೆ ಮೋದಿಯವರು ಅವಕಾಶ ಸಿಕ್ಕಾಗಲೆಲ್ಲಾ ಮಾತನಾಡುತ್ತಾರೆ. ಮೊನ್ನೆ ಮಧ್ಯಪ್ರದೇಶ ಚುನಾವಣಾ ಪ್ರಚಾರದಲ್ಲಿ ಕುಟುಂಬ ರಾಜಕಾರಣದ ವಿರುದ್ಧ ಭಾಷಣ ಮಾಡಿದ್ದರು. ಆದರೆ ಈಗ ಮಾಜಿ ಸಿಎಂ ಬಿಎಸ್‌ಯಡಿಯೂರಪ್ಪ ಅವರ ಮಗ ವಿಜಯೇಂದ್ರ ಬಿಜೆಪಿಯ ರಾಜ್ಯಾಧ್ಯಕ್ಷರಾಗಿದ್ದಾರೆ. ಇದ್ಯಾವ ರಾಜಕಾರಣ ಮೋದಿಯವರೆ? ಎಂದು ಗುಂಡೂರಾವ್ ಪ್ರಶ್ನಿಸಿದ್ದಾರೆ.

# ಹಾಸನಾಂಬೆ ಎದುರು ಪಕ್ಷ ಕಟ್ಟುವ ಪ್ರತಿಜ್ಞೆ :ಜಿ.ಟಿ.ದೇವೇಗೌಡ

**ಉದಯರಶ್ಮಿ ನ್ಯೂಸ್**

ಹಾಸನ: ಹಾಸನಾಂಬೆ ಎದುರು ಪಕ್ಷ ಬಿಡಲ್ಲ ಎಂದು ಜೆಡಿಎಸ್ ಶಾಸಕರು ಆಣೆ ಮಾಡಿದ್ದಾರೆ ಎಂಬ ಮಾತುಗಳು ಕೇಳಿ ಬಂದಿದ್ದು, ಹಾಸನಾಂಬೆ ಎದುರು ನಾವ್ಯಾರು ಆಣೆ ಮಾಡಿಲ್ಲ, ಪಕ್ಷ ಕಟ್ಟುವ ಕುರಿತು ಪ್ರತಿಜ್ಞೆ ಮಾಡಿದ್ದೇವೆ ಎಂದು ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ ಟಿ ದೇವೇಗೌಡ ಅವರು ಸ್ಪಷ್ಟಪಡಿಸಿದ್ದಾರೆ.

ಈ ಕುರಿತು ಹಾಸನದಲ್ಲಿ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಜೆಡಿಎಸ್ ನಾಯಕರು ಯಾರು ಪಕ್ಷ ಬಿಡುವುದಿಲ್ಲ. ಲಕ್ಷಾಂತರ ಜನರು ಬರುವ ತಾಯಿ ಎದುರು ಆಣೆ – ಪ್ರಮಾಣ ಸಾಧ್ಯವಾ?

ನಾವೆಲ್ಲರೂ ಕೂಡ ನಮ್ಮ ಮನಸಿನಲ್ಲಿರುವುದನ್ನು ಕೇಳಿಕೊಂಡಿದ್ದೇವೆ. ರಾಜ್ಯದಲ್ಲಿ ಪಕ್ಷ ಬಲವರ್ಧನೆ, ಕುಮಾರಸ್ವಾಮಿಯನ್ನು ಸಿಎಂ ಮಾಡುವುದು ನಮ್ಮ ಗುರಿ. ಆ ಕುರಿತು ನಾವು ಸಂಘಟನಾತ್ಮಕವಾಗಿ ಕೆಲಸ ಮಾಡುತ್ತೇವೆ ಎಂದು ಹೇಳಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿ ವೈ ವಿಜಯೇಂದ್ರ ಆಯ್ಕೆ ವಿಚಾರವಾಗಿ ಮಾತನಾಡಿ, ಬಿ ವೈ ವಿಜಯೇಂದ್ರ ಪ್ರಬಲ ಸಮುದಾಯದ ನಾಯಕ. ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷರನ್ನಾಗಿ ಮಾಡಿರುವುದು ಒಳ್ಳೆಯ ಬೆಳವಣಿಗೆ. ಯಡಿಯೂರಪ್ಪ ಸಿಎಂ ಆಗಬೇಕು ಅಂತ 50 ಸಾವಿರ ಜನ ಸೇರಿಸಿದವನು ನಾನು, ಅವರು ಮುಖ್ಯಮಂತ್ರಿ ಆದ ಮೇಲೆ ವೀರಶೈವರು ಮಾತ್ರವಲ್ಲ, ಎಲ್ಲಾ ಸಮುದಾಯದವರನ್ನು ಸೇರಿಸಿಕೊಂಡು ಒಟ್ಟಾಗಿ ಕರೆದುಕೊಂಡು ಹೋದರು. ಯಡಿಯೂರಪ್ಪ, ಕುಮಾರಸ್ವಾಮಿ ಒಟ್ಟಾಗಿ ಹೋದ ಕಾರಣಕ್ಕಾಗಿಯೇ ಅಧಿಕಾರ ಸಿಕ್ಕಿದ್ದು ಮಾತ್ರವಲ್ಲದೇ ಇಬ್ಬರು ಮುಖ್ಯಮಂತ್ರಿಯಾಗಲು ಸಾಧ್ಯವಾಯಿತು.



ಈಗ ಅದೇ ರೀತಿ ಯಡಿಯೂರಪ್ಪನವರ ಮಗನಿಗೆ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಕೊಡಲಾಗಿದೆ. ಮತ್ತೊಂದು ಕಡೆ ಕುಮಾರಸ್ವಾಮಿ ಜೆ ಡಿ ಎಸ್ ರಾಜ್ಯಾಧ್ಯಕ್ಷ ಆಗಿದ್ದಾರೆ, ಇಬ್ಬರು ಒಟ್ಟಾಗಿ ಹೋದರೆ ಕಾಂಗ್ರೆಸ್ ವಿರುದ್ಧ ಹೋರಾಟ ಮಾಡಲು ಸುಲಭವಾಗುತ್ತದೆ. ವಿಜಯೇಂದ್ರ ಯುವ ನಾಯಕ, ಅವರಿಗೆ ಎಲ್ಲಾ ಸಮುದಾಯದ ಬೆಂಬಲ ಇದೆ, ಯಡಿಯೂರಪ್ಪ ಸಿಎಂ ಆಗಲು ವಿಜಯೇಂದ್ರ ಚಾಣಾಕ್ಷತವು ಇದೆ.

ಯಡಿಯೂರಪ್ಪರನ್ನು ಮೂಲೆ ಗುಂಪು ಮಾಡಿದರು ಎನ್ನುವ ಕಾರಣಕ್ಕೆ ಬಿಜೆಪಿಗೆ ಹಿನ್ನಡೆಯಾಗಿತ್ತು.ಆದ್ದರಿಂದ ವಿಜಯೇಂದ್ರ ಆಯ್ಕೆ ಸೂಕ್ತವಾಗಿದೆ, ಇದೆಲ್ಲವನ್ನು ಯೋಚನೆ ಮಾಡಿಯೇ ಬಿಜೆಪಿ ವರಿಷ್ಠರು ವಿಜಯೇಂದ್ರಗೆ ಅಧಿಕಾರ ಕೊಟ್ಟಿದ್ದಾರೆ ಎಂದು ತಿಳಿಸಿದರು.

# ಬೆಳಕಿನ ಹಬ್ಬದ ಸಂದರ್ಭದಲ್ಲಿ ಜ್ಞಾನದ ಜ್ಯೋತಿ ಬೆಳಗಲಿ, ಬೆಂಕಿಯ ಜ್ವಾಲೆಯಲ್ಲ

**ಉದಯರಶ್ಮಿ ದಿನಪತ್ರಿಕೆ**



ಜ್ಞಾನದ ಮರು ಪೂರಣ..

ಜ್ಞಾನ – ಬುದ್ದಿ – ತಿಳಿವಳಿಕೆ..

ಎಂಬ ಸಾಮಾನ್ಯ ಅರ್ಥದ ಅನುಭವ ಅಥವಾ ಅನುಭಾವ ಮುಗಿದು ಹೋಗುವ ವಸ್ತುಗಳ ಪಟ್ಟಿಯಲ್ಲಿ ಸೇರುತ್ತದೆ..

ಸಾಮಾನ್ಯವಾಗಿ ಪ್ರಕೃತಿಯಲ್ಲಿ ಎರಡು ರೀತಿಯ ವಸ್ತುಗಳನ್ನು ಪಟ್ಟಿ ಮಾಡಲಾಗಿದೆ. ಮುಗಿದ ಹೋಗುವ ಮತ್ತು ಎಂದೂ ಮುಗಿಯದ ವಸ್ತುಗಳು ಎಂದು..

ಜ್ಞಾನ ಮೊದಲ ಪಟ್ಟಿಯಲ್ಲಿ ಸೇರುತ್ತದೆ. ಆದರೆ ಅದರ ವಿಶೇಷತೆ ಎಂದರೆ ಅದಕ್ಕೆ ಎರಡನೇ ಪಟ್ಟಿಯಲ್ಲಿಯೂ ಸ್ಥಾನ ಕಲ್ಪಿಸಬಹುದು. ಅದು ವ್ಯಕ್ತಿಗಳ ಶ್ರಮ ಸಾಧನೆ ಮತ್ತು ಪ್ರಯತ್ನದ ಮೇಲೆ ಅವಲಂಬಿಸಿರುತ್ತದೆ..

ಒಂದಷ್ಟು ಜನ ಜ್ಞಾನ ಎಂದರೆ ಹಣ ಅಧಿಕಾರ ಆಸ್ತಿ ಸಂಪಾದನೆ ಎಂದು ಭಾವಿಸಿರುತ್ತಾರೆ. ಅದರ ಆಧಾರದ ಮೇಲೆ ಜ್ಞಾನವನ್ನು ಅಳೆಯುತ್ತಾರೆ. ಎಷ್ಟು ಯಶಸ್ವಿಯಾಗುವರೋ ಅಷ್ಟು ಜ್ಞಾನಿಗಳು ಎಂಬ ಅರ್ಥದಲ್ಲಿ..

ಇನ್ನೊಂದಿಷ್ಟು ಜನ ಅಕ್ಷರ ಕಲಿಕೆಯ ಮೂಲಕ ಅಂಕಗಳ ಆಧಾರದ ಮೇಲೆ ಪಡೆಯುವ ಉದ್ಯೋಗ ಸಂಬಳ ಮತ್ತು ಸ್ಥಾನಮಾನಗಳನ್ನು ಜ್ಞಾನದ ಬಲದಿಂದ ಪಡೆದದ್ದು ಎಂದು ಅರ್ಥೈಸುತ್ತಾರೆ..

ಮತ್ತೆ ಕೆಲವರು ಜ್ಞಾನವೆಂಬುದು ಅರಿವಿನ ಕ್ರಮ. ಅದು ಒಂದು ಜೀವನಶೈಲಿ. ಬದುಕಿನ ಅನುಭವದ




ಮೂಲಕ ಗಳಿಸಿಕೊಳ್ಳುವ ತಿಳಿವಳಿಕೆ ಎಂದೂ ಕರೆಯುತ್ತಾರೆ..

ಇನ್ನೂ ಹಲವರು ಜ್ಞಾನ ಓದಿನಿಂದ, ಪ್ರಯಾಣ ಪ್ರವಾಸದಿಂದ, ಸಜ್ಜನರ ಸಹವಾಸದಿಂದ, ಚಿಂತನೆಗಳಿಂದ, ಅಲೌಕಿಕ ಶಕ್ತಿಗಳಿಂದ, ಧ್ಯಾನ ಯೋಗ ಮುಂತಾದ ಆಧ್ಯಾತ್ಮಿಕ ಶಕ್ತಿಯಿಂದ ಮೂಡುವ ಅನುಭವದ ಅನುಭಾವ ಎಂದೂ ಕರೆಯುತ್ತಾರೆ..

ಈ ಎಲ್ಲಾ ಅಭಿಪ್ರಾಯಗಳು ಜ್ಞಾನಕ್ಕೆ ಹೇರುವ



ಮಿತಿಗಳು ಅಥವಾ ನಮ್ಮ ಅನುಕೂಲಕ್ಕೆ ತಕ್ಕಂತೆ ಅರ್ಥೈಸಿ ನಾವು ಮಾಡಿಕೊಳ್ಳಬಹುದಾದ ಸಮಾಧಾನ ಮಾತ್ರ..

ಏಕೆಂದರೆ ಜ್ಞಾನವೆಂಬುದು ಒಂದು ಮಿತಿಗೆ ಒಳಪಡುವ ಅನುಭಾವವಲ್ಲ. ಅದನ್ನು ನಿರ್ಧಿಷ್ಟವಾಗಿ ಹೀಗೆ ಎಂದು ಕಟ್ಟಿಹಾಕಲು ಸಾಧ್ಯವಿಲ್ಲ. ಅದು ನಿಂತ ನೀರಲ್ಲ. ಹರಿಯುವ ನದಿ. ಆದರೆ ಅದನ್ನು ನಾವು ಆಗಾಗ ತುಂಬಿಸುತ್ತಿರಬೇಕು. ಅದು ನಿರಂತರವಾಗಿ ತನ್ನ ಚಲನಶೀಲ ಗುಣವನ್ನು ಉಳಿಸಿಕೊಳ್ಳಬೇಕಾದರೆ ನಮ್ಮ ಪ್ರಯತ್ನವೂ ಮುಖ್ಯ. ಎಂದೋ ಏನೋ ಓದಿದ ಕೇಳಿದ ನೋಡಿದ ಚಿಂತಿಸಿದ ವಿಷಯಗಳ ಮೇಲೆ ರೂಪಿಸಿಕೊಂಡ ಜ್ಞಾನ ಎಲ್ಲಾ ಕಾಲಕ್ಕೂ ಸಲ್ಲುತ್ತದೆ ಅಷ್ಟು ಸಾಕು ಎಂಬ ಅಜ್ಞಾನ ಕೆಲವರಲ್ಲಿ ಇರುತ್ತದೆ. ಐಎಎಸ್ ಕೆಎಎಸ್ ಸೇರಿ ಆ ರೀತಿಯ ಅಧಿಕಾರಿಗಳೇ ಇರಬಹುದು, ವೈದ್ಯ, ಇಂಜಿನಿಯರ್, ಶಿಕ್ಷಕ, ವಕೀಲ, ವಿಜ್ಞಾನಿ, ಚಾಲಕ ಸೇರಿ ಆ ರೀತಿಯ ವೃತ್ತಿ ನಿರತರೇ ಇರಬಹುದು, ರಾಜಕಾರಣಿ, ಧರ್ಮಾಧಿಕಾರಿ, ವ್ಯಾಪಾರಿ ರೀತಿಯ ಮಹತ್ವಾಕಾಂಕ್ಷಿಗಳೇ ಇರಬಹುದು ಅಥವಾ ಇವುಗಳಿಗೆ ಸೇರದ ಇನ್ನೂ ಯಾರೇ ಆಗಿರಲಿ ಒಂದು ಹಂತದವರೆಗೆ ಕಷ್ಟ ಪಟ್ಟು ಆ ವಿಷಯದಲ್ಲಿ ಜ್ಞಾನವನ್ನು ಪಡೆಯಲು ಪ್ರಯತ್ನಿಸುತ್ತಾರೆ ಮತ್ತು ಅದನ್ನು ತಮ್ಮ ಭೌತಿಕ ಬೆಳವಣಿಗೆಗೆ ಉಪಯೋಗಿಸಿಕೊಳ್ಳುತ್ತಾರೆ. ಅಲ್ಲಿ ಒಂದಷ್ಟು ಯಶಸ್ಸು ಹಣ ಅಧಿಕಾರ ಸಿಕ್ಕ ನಂತರ ಜ್ಞಾನವನ್ನು ನಿರ್ಲಕ್ಷಿಸುತ್ತಾರೆ ಅಥವಾ ವೇಗ ಮತ್ತು ಸ್ಪರ್ಧಾತ್ಮಕ ಮಾರುಕಟ್ಟೆಯಲ್ಲಿ ಕಳೆದುಹೋಗುತ್ತಾರೆ ಅಥವಾ ತಮಗೆ ಈಗಾಗಲೇ ಜ್ಞಾನದ ಅರಿವು ಸಾಕಷ್ಟು ಇದೆ. ಅದೇ ಕಾರಣದಿಂದಾಗಿ ನಾವು ಈ ಯಶಸ್ಸು ಪಡೆದಿರುವುದು ಎಂದು ಭಾವಿಸಿ ತೃಪ್ತರಾಗಿರುತ್ತಾರೆ ಅಥವಾ ಆ ರೀತಿಯ ಅಜ್ಞಾನ ಅಹಂಕಾರ ಮನೋಭಾವ ಹೊಂದಿರುತ್ತಾರೆ..

ಆ ಪರಿಸ್ಥಿತಿಯನ್ನೇ ಮುಗಿದ ಹೋಗುವ ಜ್ಞಾನದ ಹಂತ ಎಂದು ಕರೆಯುವುದು. ನಮ್ಮ ಅರಿವಿಗೆ ನಾವು ಹೇರಿಕೊಳ್ಳುವ ಮಾನಸಿಕ ಮಿತಿ ಇದು. ಇದು ಕ್ರಮೇಣ ನಮ್ಮ ಮಾನಸಿಕ ಸಮತೋಲನವನ್ನು ಕಾಯ್ದುಕೊಳ್ಳಲು ವಿಫಲವಾಗಿ ಅತೃಪ್ತಿ ಅಸಮಾಧಾನ ಅಸಹನೆಗೆ ಕಾರಣವಾಗುತ್ತದೆ. ಏಕೆಂದರೆ ನಮಗರಿವಿಲ್ಲದೆ ಜ್ಞಾನವೆಂಬ ಅರಿವಿನ ವಿಟಮಿನ್ ಕೊರತೆ ನಮಗೆ ಕಾಡುತ್ತದೆ ಮತ್ತು ನಮಗಿರುವ ಜ್ಞಾನದ ಮಟ್ಟ ನಮ್ಮ ಮಾನಸಿಕ ಸಮತೋಲನ ಕಾಪಾಡಲು ಸಾಕಾಗುವುದಿಲ್ಲ..

ಆದ್ದರಿಂದ ಆ ಜ್ಞಾನವೆಂಬ ಅನುಭಾವವನ್ನು ನಿರಂತರವಾಗಿ ಬ್ಯಾಟರಿ ಚಾರ್ಜ್ ಮಾಡುವಂತೆ ಆಗಾಗ ಮಾಡುತ್ತಲೇ ಇರಬೇಕು. ಅದು ಕಡಿಮೆಯಾಗುತ್ತಿದ್ದಂತೆ ಮತ್ತೆ ಮತ್ತೆ ಚಾರ್ಜ್ ಮಾಡಬೇಕು. ಇಲ್ಲದಿದ್ದರೆ ಅದು ಡೆಡ್ ಸ್ಥಿತಿಗೆ ಬರುತ್ತದೆ ಮುಂದೆ ಅದನ್ನು ಉಪಯೋಗಿಸುವುದು ಕಷ್ಟ..

ಆದರೆ ಜ್ಞಾನದ ಬ್ಯಾಟರಿಯನ್ನು ಹೇಗೆ ಚಾರ್ಜ್ ಮಾಡಬೇಕು ಎಂಬುದು ವ್ಯಕ್ತಿಯ ಮಾನಸಿಕ, ದೈಹಿಕ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ಪ್ರದೇಶವಾರು ಸೇರಿ ಅನೇಕ ವಿಷಯಗಳನ್ನು ಅವಲಂಬಿಸಿರುತ್ತದೆ. ಕಾಯಕದಿಂದ, ಯೋಗದಿಂದ, ಧ್ಯಾನದಿಂದ, ಭಕ್ತಿಯಿಂದ, ಅಧ್ಯಯನದಿಂದ, ಚಿಂತನೆಯಿಂದ, ಪ್ರವಾಸದಿಂದ, ಅಭ್ಯಾಸದಿಂದ, ಯೋಚನಾ ಶಕ್ತಿಯ ಹೊಸ ಪ್ರಯೋಗಗಳಿಂದ, ಜನರ ಒಡನಾಟದಿಂದ, ಪ್ರಕೃತಿಯ ಮಡಿಲಿನ ವಾಸದಿಂದ, ಕೆಲವೊಮ್ಮೆ ಮೌನದಿಂದ, ನಿರ್ಲಿಪ್ತತೆಯಿಂದ, ಕಲಿಕೆಯಿಂದ, ವಿಶಾಲ ಹೃದಯದಿಂದ ಹೀಗೆ ನಾನಾ ರೀತಿಯಲ್ಲಿ ಅದನ್ನು ಚಾರ್ಜ್ ಮಾಡಿಕೊಳ್ಳುವ ಅವಕಾಶ ಮತ್ತು ಸಾಧ್ಯತೆ ಇರುತ್ತದೆ. ಇದರಿಂದಾಗಿ ನಮ್ಮ ಒಟ್ಟು ವ್ಯಕ್ತಿತ್ವ ವಿಕಸನವಾಗಿ ನಮ್ಮ ಜೀವನಮಟ್ಟ ಸುಧಾರಿಸುತ್ತದೆ.

ಜ್ಞಾನಕ್ಕೆ ಅಪಾರ ಶಕ್ತಿ ಇದೆ. ಅದು ನಮ್ಮ ನೋವು ನಲಿವುಗಳನ್ನು ನಿಯಂತ್ರಿಸುತ್ತದೆ. ಮಾನಸಿಕ ಮತ್ತು ದೈಹಿಕ ಸಮತೋಲನ ಕಾಪಾಡುತ್ತದೆ. ಕ್ರಿಯೆ ಪ್ರತಿಕ್ರಿಯೆಗಳು ನಮ್ಮ ಹಿಡಿತಕ್ಕೆ ಸಿಗುವಂತೆ ಮಾಡುತ್ತದೆ. ನಮ್ಮೊಳಗಿನ ಅಜ್ಞಾನವನ್ನು ನಮಗೆ ತಿಳಿಸಿಕೊಡುತ್ತದೆ. ಹಾಗೆಯೇ ನಮ್ಮೊಳಗಿನ ಅಪಾರ ಸಾಮರ್ಥ್ಯವನ್ನು ನಮಗೆ ಪರಿಚಯಿಸಿ ಸಾಧನೆ ಮಾಡಲು ಪ್ರೇರೇಪಿಸುತ್ತದೆ. ನಮ್ಮ ದೈನಂದಿನ ಸಮಸ್ಯೆಗಳಿಗೆ ಪರಿಹಾರವನ್ನು ಸೂಚಿಸುತ್ತದೆ.

ಬೆಳಕಿ ಹಬ್ಬ ದೀಪಾವಳಿಯ ಜ್ಯೋತಿ ಬೆಳಗುವ ಸಾಂಪ್ರದಾಯಿಕ ವ್ಯವಸ್ಥೆಯ ಸಾಂಕೇತಿಕತೆ ಇದನ್ನು



ಪ್ರತಿಬಿಂಬಿಸುತ್ತದೆ. ನಾವು ನಮ್ಮೊಳಗಿನ ಜ್ಞಾನದ ಹಣತೆಯನ್ನು ಬೆಳಗಿಸುವ ಸಂಕಲ್ಪ ಮಾಡಲು ಈ ಹಬ್ಬವನ್ನು ಉಪಯೋಗಿಸಿಕೊಳ್ಳೋಣ ಎಂದು ಮನವಿ ಮಾಡುತ್ತಾ..

ಎಷ್ಟೋ ಸಂದರ್ಭಗಳಲ್ಲಿ ಇಂದಿನ ಜ್ಞಾನ ಮುಂದಿನ ಅಜ್ಞಾನವಾಗಲೂಬಹುದು

ಅದು ಚಲಿಸದೇ ತಟಸ್ಥವಾದಾಗ, ಆದ್ದರಿಂದ ಇಂಧನದ ರೀತಿ ಜ್ಞಾನವನ್ನು ಮರು ಪೂರಣ ಮಾಡುತ್ತಲೇ ಇರೋಣ..

ಎಲ್ಲರಿಗೂ ದೀಪಾವಳಿ ಹಬ್ಬದ ಶುಭಾಶಯಗಳು..



# ಗುರುಶಿಷ್ಯರು

ಉದಯರಶ್ಮಿ ದಿನಪತ್ರಿಕೆ



ಮಹಾತ್ಮರಿಗೊಬ್ಬ ಶಿಷ್ಯನಿದ್ದ. ಅವನ ಹೆಸರು ದುಷ್ಟ ಅಂತ. ಆ ಶಿಷ್ಯನಿಗೆ ತನ್ನ ಹೆಸರಿನ ಬಗ್ಗೆ ಅತೀವವಾದ ನೋವಿತ್ತು. ಕೆಟ್ಟ ಕೆಲಸ ಮಾಡದಿದ್ದರೂ ಲೋಕದ ದೃಷ್ಟಿಯಲ್ಲಿ ದುಷ್ಟನಾದೆನಲ್ಲ ಎಂಬ ಕೊರತೆ ಅವನನ್ನು ಕಾಡುತಿತ್ತು. ಒಂದು ದಿನ ಆತ ಗುರುಗಳ ಬಳಿ ಹೋದ. ತನ್ನ ಸಂಕಟವನ್ನು ತೋಡಿಕೊಂಡ. ಗುರುಗಳು ನಕ್ಕು ನುಡಿದರು. ಹೊರಗಿನ ಪ್ರಪಂಚವನ್ನು ಒಮ್ಮೆ ಸುತ್ತಿ ಬಾ. ಯಾರ್ಯಾರ ಹೆಸರು ಹೇಗಿದೆ ಎಂಬುದನ್ನು ತಿಳಿದುಕೊಂಡು ಬಾ ಎಂದರು.



ವಿದ್ಯಾರ್ಥಿ ನಿಧಿ

– ಮಂಡ್ಯ.ಮ.ನಾ.ಉಡುಪ

ಗುರುಗಳ ಆಜ್ಞೆಯಂತೆ ಶಿಷ್ಯನು ಲೋಕಸಂಚಾರಕ್ಕೆ ಹೊರಟ. ಮಾರ್ಗಮಧ್ಯೆ ಬಿಕ್ಷುಕನೊಬ್ಬ ಎದುರಾದ. ಅವನೋ ದಟ್ಟದ–ರಿದ್ರ ಆದರೆ ಅವನ ಹೆಸರು ಮಾತ್ರ ಶ್ರೀಮಂತನೆಂದಾಗಿತ್ತು. ಮರುದಿನ ಅವನಿಗೆ ದಾರಿಯಲ್ಲಿ ಅಳುತ್ತಿದ್ದ ಯುವಕನೊಬ್ಬ ಎದುರಾದ. ಯಾಕಯ್ಯಾ ಅಳುತ್ತಿದ್ದೀಯಾ? ಎಂದು ಪ್ರಶಿಸಿದ ಆ ಶಿಷ್ಯ. ನನಗೆ ವ್ಯಾಪಾರದಲ್ಲಿ ಅತೀವ ನಷ್ಟವಾಯಿತು. ನನ್ನ ಮಗ ತನ್ನೆಲ್ಲಾ ಸಮಯವನ್ನು ಜೂಜಿನಲ್ಲೇ ವ್ಯಯ ಮಾಡುತ್ತಾನೆ. ನನ್ನ ಹೆಂಡತಿಯೂ ಸದಾ ಕಾಯಿಲೆಯಲ್ಲೇ ನರಳುತ್ತಿರುತ್ತಾಳೆ ಎಂದ ಆ ಯುವಕ.

ಆ ಶಿಷ್ಯನೋ ಕುತೂಹಲದಿಂದ ನಿಮ್ಮ ಹೆಸರೇನು ಎಂದು ಪ್ರಶಿಸುತ್ತಾನೆ. ಆ ಯುವಕ ತನ್ನ ಹೆಸರು ಆನಂದ ಎನ್ನುತ್ತಾನೆ. ಅದೇ ದಿನ ಗುರುಗಳ ಶಿಷ್ಯನ ಕಣ್ಮುಂದೆಯೇ ರಾಜಾಜ್ಞೆಯಂತೆ ಒಬ್ಬನನ್ನು ಮರವೊಂದಕ್ಕೆ ನೇಣು ಹಾಕುತ್ತಾರೆ. ಹೀಗೆ ಶಿಕ್ಷೆಗೆ ಗುರಿಯಾದ ವ್ಯಕ್ತಿಯ ಹೆಸರೋ ಚಿರಂಜೀವಿ ಎಂತಾಗಿರುತ್ತದೆ.

ದೃತಿಗೆಟ್ಟ ಶಿಷ್ಯ ಗುರುಗಳ ಬಳಿ ಹಿಂದಿರುಗುತ್ತಾನೆ. ಏನಯ್ಯಾ ಶಿಷ್ಯ ದಾರಿಯಲ್ಲಿ ಯಾವ್ಯಾವ ಹೆಸರಿನವರನ್ನು ಸಂಧಿಸಿದೆ? ಯಾರಾ ಹೆಸರನ್ನು ಇಟ್ಟುಕೊಳ್ಳಲು ಬಯಸುತ್ತೀಯಾ ಎಂದು ಗುರುಗಳು ಪ್ರಶ್ನೆ ಮಾಡುತ್ತಾರೆ.

ಇಲ್ಲಾ ಗುರುಗಳೇ ನಾನೀಗ ಮನಸ್ಸು ಬದಲಿಸಿಕೊಂಡಿದ್ದೇನೆ. ಕೇವಲ ಹೆಸರನ್ನು ಇಟ್ಟುಕೊಳ್ಳುವುದ–ರಿಂದ ಏನೂ ಪ್ರಯೋಜನವಿಲ್ಲ. ಎನ್ನುವ ತೀರ್ಮಾನಕ್ಕೆ ಬಂದಿದ್ದೇನೆ

ಮನೆಯಂಗಳದಲ್ಲಿ ಜಿ.ಕೆ.ಸತ್ಯ ಮಾತು । ಕೆಯುಡಬ್ಲ್ಯೂಜೆ ಗೆ ಬಂದಿದ್ದ ಅಂದಿನ ಪ್ರಧಾನಿ ನೆಹರು

# ಮಾಧ್ಯಮ ಅಕಾಡೆಮಿ ಕೆಯೂಡಬ್ಲ್ಯೂಜೆ ಹೋರಾಟದ ಫಲ

ಉದಯರಶ್ಮಿ ನ್ಯೂಸ್




ಬೆಂಗಳೂರು: ಆಗಿನ ಪ್ರಧಾನಿ ಜವಹರಲಾಲ್ ನೆಹರು ಅವರು ಕೂಡ ಕೆಯುಡಬ್ಲ್ಯೂಜೆ ಗೆ ಬಂದಿದ್ದರು. ಕೆಯುಡಬ್ಲ್ಯೂಜೆ ಹೋರಾಟದ ಪಲವಾಗಿಯೇ ಅಂದು ಪತ್ರಿಕಾ ಅಕಾಡೆಮಿ ಸ್ಥಾಪನೆಯಾಯಿತು. ಭಾರತೀಯ ಪತ್ರಕರ್ತರ ಸಂಘಟನೆಯಲ್ಲಿ ಕೆಯುಡಬ್ಲ್ಯೂಜೆ ಪಾತ್ರ ಹಿರಿದು..

ಹೀಗೆಂದವರು ಎಂಬತ್ತೊಂದು ವಸಂತ ತುಂಬಿರುವ

ಹಿರಿಯ ಪತ್ರಕರ್ತ, ಕೆಯುಡಬ್ಲೂಜೆ ಮಾಜಿ ಅಧ್ಯಕ್ಷ ಜಿ.ಕೆ.ಸತ್ಯ ಅವರು.

ಮನೆಯಂಗಳದಲ್ಲಿ ಮನದುಂಬಿ ಕಾರ್ಯಕ್ರಮದಲ್ಲಿ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಗೌರವ ಸ್ವೀಕರಿಸಿ ಮಾತನಾಡಿದರು.

ಪತ್ರಕರ್ತರ ಸಂಘಟನೆ ಮತ್ತು ಕಾರ್ಯಚಟುವಟಿಗಳಲ್ಲಿ ತನ್ನ ಜೀವಮಾನದ ಬಹುಪಾಲಿನ ಸಮಯ ಕಳೆದಿರುವೆ. ಆಗ 26 ಜಿಲ್ಲೆಗೂ ಪ್ರವಾಸ ಮಾಡಿ ಸಂಘಟನೆ ಮಾಡಿದ್ದೆವು ಜಿ.ಕೆ. ಸತ್ಯ ತಿಳಿಸಿದರು.

ಕೆಯೂಡಬ್ಲೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ನೇತ್ರತ್ವದಲ್ಲಿ ಕಳೆದ ವರ್ಷದಿಂದ ನಡೆಸಿಕೊಂಡು ಬರುತ್ತಿರುವ ಹಿರಿಯ ಪತ್ರಕರ್ತರನ್ನು ಗೌರವಿಸುವ ಮನೆಯಂಗಳದಲ್ಲಿ ಮನತುಂಬಿ ಕಾರ್ಯಕ್ರಮ ಅರ್ಥ–ಪೂರ್ಣವಾಗಿದೆ. ಇದರಿಂದ ಎಷ್ಟೋ ಜನರ ಭಾವ ಬಂದ ಬೆಸೆದಂತಾಗುತ್ತದೆ ಎಂದರು.

ರಾಜ್ಯ ಸಂಘದಲ್ಲಿ ಎರಡು ಅವಧಿಗೆ ಪ್ರಧಾನ ಕಾರ್ಯದರ್ಶಿ, ಮತ್ತು ಮೂರು ಬಾರಿ ಅಧ್ಯಕ್ಷ ರಾಗಿ ಸೇವೆ ಸಲ್ಲಿಸಿ ಸುಮಾರು ಮೂರು ದಶಕಗಳ ಕಾಲ ಪತ್ರಕರ್ತರ ಸಂಘದ ಕಾರ್ಯ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ತಮ್ಮನ್ನು ತೊಡಗಿಸಿಕೊಂಡಿರುವ ಸಾರ್ಥಕತೆ ನನಗಿದೆ ಎಂದರು.

ಆಗಿನ ಪ್ರಧಾನಿಗಳಾದ ಜವಹರಲಾಲ್ ನೆಹರು ಅವರು ಕೆಯುಡಬ್ಲ್ಯೂಜೆ ಗೆ ಬಂದಿದ್ದರು. ತೊಂಬತ್ತು ವರ್ಷಗಳ ಬಹುದೊಡ್ಡ ಇತಿಹಾಸ ಈ ಸಂಘಟನೆಗಿದೆ ಎಂದರು.

ಇತರ ಕಾರ್ಮಿಕ ಸಂಘಟನೆಗು, ಪತ್ರಕರ್ತರ ಕಾರ್ಮಿಕ ಸಂಘಟನೆಗೂ ಬಹಳ ವ್ಯತ್ಯಾಸ ಇರುವುದಾಗಿ ಪ್ರತಿಪಾದಿಸುವ ಅವರು ಪತ್ರಕರ್ತರ ಹಿತ ರಕ್ಷಣೆ, ಆಡಳಿತ ವರ್ಗ ಮಾಡಬೇಕಾದ ಕೆಲಸ ಸೇರಿದಂತೆ ಹತ್ತಾರು ಕೆಲಸವನ್ನು ಈ ಸಂಘಟನೆ ಮಾಡಿಕೊಂಡು ಬಂದಿದೆ ಎಂದರು. ಇದೇ ಸಂದರ್ಭದಲ್ಲಿ

ಅವರು ಕಾನೂನು ಬದ್ದವಾಗಿ ನಡೆಸಿದ ಹೋರಾಟವನ್ನು ಮೆಲುಕು ಹಾಕಿದರು

ಮಾಧ್ಯಮ ಅಕಾಡೆಮಿ:

ಕೆಯುಡಬ್ಲ್ಯೂಜೆ ಹೋರಾಟದ ಪಲವಾಗಿ ಪತ್ರಿಕಾ ಅಕಾಡೆಮಿ ರಾಜ್ಯದಲ್ಲಿ ಸ್ಥಾಪನೆಯಾದದ್ದು ಇತಿಹಾಸ .

ಸಿಎಂ ರಾಮಕೃಷ್ಣ ಹೆಗಡೆ ಸರ್ಕಾರದಲ್ಲಿ ವಾರ್ತಾ ಸಚಿವರಾಗಿದ್ದಾಗ

ನಮ್ಮ ಪ್ರಸ್ತಾವನೆಗೆ ಮನ್ನಣೆ ಸಿಕ್ಕಿತು. ಸರ್ಕಾರದ ಸೂಚನೆ ಮೇರೆಗೆ ಕೇರಳ ರಾಜ್ಯದಲ್ಲಿ ಪತ್ರಕರ್ತರ ಅಕಾಡೆಮಿ ಪ್ರಾರಂಭವಾಗಿರುವ ಬಗ್ಗೆ ಅಧ್ಯಯನ ಮಾಡಿ ವರದಿ ನೀಡಿದೆವು. ಅದಕ್ಕೆ ಸ್ಪಂದಿಸಿದ ಸಚಿವರು ಅಕಾಡೆಮಿಯ ನಿಯಮ ಮತ್ತು ದ್ಯೇಯೋದ್ದೇಶಗಳ ಕುರಿತು ಕರಡು ಸಿದ್ಧಪಡಿಸುವಂತೆ ಸೂಚಿಸಿದರು. ಅದರಂತೆ ನಾನು ಮತ್ತು ಅರ್ಜುನ್ ದೇವ್ ಅವರು ಸೇರಿದಂತೆ ಒಟ್ಟಾಗಿ ಸಿದ್ಧಪಡಿಸಿದೆವು. ಪತ್ರಿಕಾ ಅಕಾಡೆಮಿ ಸ್ಥಾಪನೆಯಾಯಿತು. ಈಗ ಮಾಧ್ಯಮ ಅಕಾಡೆಮಿ ಆಗಿ ಬದಲಾಗಿದೆ ಎಂದು ಹೆಮ್ಮೆಯಿಂದಲೇ ಅವರು ಹೇಳಿದರು.

ಸಂಕಷ್ಟದಲ್ಲಿದ್ದ ಪತ್ರಕರ್ತರ ಕುಟುಂಬಕ್ಕೆ ನೆರವು ದೇಶಕ್ಕೇ ಮಾದರಿ.

ಕೊವಿಡ್ ಸಂದರರಭದಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಕೆಲಸ ಮಾಡುವ ಅನೇಕರು ಮರಣ ಹೊಂದಿದ ಸಂದರ್ಭಗಳಲ್ಲಿ ಸಂಕಷ್ಟಕ್ಕೀಡಾದ ಅವರ ಕುಟುಂಬಗಳಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ನೆರವಿಗೆ ದಾವಿಸಿದ್ದು, ತಲಾ 5 ಲಕ್ಷ ಪರಿಹಾರ ಕೊಡಿಸಿದ್ದು, ಈ ನಿಟ್ಟಿನಲ್ಲಿ ಶಿವಾನಂದ ತಗಡೂರು ಅವರ ಹೋರಾಟ ಶ್ಲಾಘನೀಯ. ಸರಕಾರದ ಮನ ಒಲಿಸಿ ಒತ್ತಡ ಹಾಕಿ ನೆರವು ಕೊಡಿಸಿದ ಅವರ ಪರಿಶ್ರಮವನ್ನು ಯಾರೂ ಮರೆಯಬಾರದು. ಇದು ದೇಶಕ್ಕೇ ಮಾದರಿ ಎಂದರು.

ಪತ್ರಕರ್ತರು ತಮ್ಮ ವೃತ್ತಿ ಜೊತೆಗೆ ಬದ್ಧತೆಯನ್ನು ಇಟ್ಟುಕೊಳ್ಳಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಜಿ.ಕೆ ಸತ್ಯ ಅವರ ಪತ್ನಿ ಜಿ. ಎಸ್ ವಿಜಯಾ ಅವರನ್ನು ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘಟನೆಗೆ ಜಿ.ಕೆ.ಸತ್ಯ ಅವರ ಸೇವೆ ಅನನ್ಯ ಎಂದರು.

ಪ್ರಧಾನ ಕಾರ್ಯದರ್ಶಿ ಜಿ.ಸಿ ಲೋಕೇಶ ಸ್ವಾಗತಿಸಿದರು. ಖಜಾಂಚಿ ಎಂ.ವಾಸುದೇವ ಹೊಳ್ಳ ವಂದಿಸಿದರು. ರಾಜ್ಯ ಸಮಿತಿ ಸದಸ್ಯ ಕೆ.ಆರ್ ದೇವರಾಜ್, ಪತ್ರಿಕಾ ಛಾಯಾಗ್ರಾಹಕ ಶರಣ ಬಸಪ್ಪ ಹಾಜರಿದ್ದರು.

ಉದಯರಶ್ಮಿ ನೀವೂ ಬರೆಯಿರಿ..

ನಿಮ್ಮೂರಿನ, ನಿಮ್ಮ ಸುತ್ತಮುತ್ತಲಿನ ಸಮಸ್ಯೆಗಳ ಮೇಲೆ ನೀವೂ ಬೆಳಕು ಚೆಲ್ಲಬಹುದು, ಸಾಮಾಜಿಕ ಸಮಸ್ಯೆಗಳು ಹಾಗೂ ಮಾನವಿಯ ಕಳಕಳಿಯ ಬರಹಗಳನ್ನು ಸಂಬಂಧಿಸಿದ ಫೋಟೊದೊಂದಿಗೆ ನಮಗೆ ಕಳುಹಿಸಿ, 'ಉದಯರಶ್ಮಿ' ದಿನಪತ್ರಿಕೆಯಲ್ಲಿ ಆದ್ಯತೆಯ ಮೇಲೆ ಪ್ರಕಟಿಸಲಾಗುವುದು.

– ಸಂಪಾದಕ

ಇಲ್ಲಿ ಕಳುಹಿಸಿ.. Whatsapp : 7026028778
email: editor.udayarashmi@gmail.com

## ಒನಕೆ ಒಬ್ಬವ್ವ ಜಯಂತಿ ಆಚರಣೆ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಶನಿವಾರ ವೀರವನಿತೆ ಒನಕೆ ಒಬ್ಬವ್ವ ಜಯಂತಿಯಂಗವಾಗಿ ಒನಕೆ ಒಬ್ಬವ್ವ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಎಚ್. ಎಸ್.ಚಿತ್ತರಗಿ, ಪುರಸಭೆ ಸದಸ್ಯರಾದ ಅಶೋಕ ಹಾರಿವಾಳ, ನಜೀರ ಗಣಿ, ಜಗದೇವಿ ಗುಂಡಳ್ಳಿ, ತಾಪಂ ಮಾಜಿ ಅಧ್ಯಕ್ಷ ಕಲ್ಲು ಸೊನ್ನದ, ಪುರಸಭೆ ಅಭಿಯಂತರ ಮಹಾದೇವ ಜಂಬಗಿ, ಕಿರಿಯ ಆರೋಗ್ಯ ನಿರೀಕ್ಷಕ ಮಹೇಶ ಹಿರೇಮಠ, ಗೀತಾಂಜಲಿ ದಾಸರ, ಮೊಗಿನ, ಕಿರಣ ಕಿಣಗಿ ಇತರರು ಇದ್ದರು.

ಉದಯರಶ್ಮಿ ದಿನಪತ್ರಿಕೆ

## ಕಾವ್ಯರಶ್ಮಿ

– ಜಯಂತಿ ಎಸ್ ಭಟ್ಟಿ
("ನಮ್ಮ ಕಥಾ ಅರಮನೆ" ಬರಹಗಾರರು)




### ಹೃದಯ

ಮೌನದಿ ಕೂತಿರದೆ ಅನವರತವಾಗಿ
ನೆನಪನು ಹೊತ್ತು ತರುವೆ ನನಗಾಗಿ

ಬೆಚ್ಚಗೆ ಮಲಗಿಸಿ ಪ್ರೀತಿ ಹಕ್ಕಿಯನು
ಭಾವ ಧಾರೆಯಲಿ ಕೈಹಿಡಿವೆ ನನ್ನನು


ಕರೆದಾಗ ಓಗುಟ್ಟು ನಡೆಸುವೆ ಹರಟೆ
ನುಡಿಸುತ ನನ್ನ ಕನಸುಗಳಿಗೆ ತಮಟೆ

ನೋವು ಮರೆಸುವ ನಗುವಿನಾಲಯ
ಭಾವದ ಜೀವಕೆ ದನಿ ನೀನು ಹೃದಯ



# ದೀಪಾವಳಿಯಲ್ಲಿ ಪಟಾಕಿಯ ಹಾವಳಿ

## ಭಾವರಶ್ಮಿ



– ಮಮತಾ ಶೃಂಗೇರಿ
("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ದೀಪಾವಳಿ ಹಬ್ಬ ಬರುವ ಒಂದು ತಿಂಗಳಿಗೂ ಮೊದಲೇ ಹಬ್ಬದ ಸಡಗರ ಶುರುವಾಗುತ್ತದೆ, ಹಬ್ಬಗಳ ನಡುವೆ ದೀಪಾವಳಿಯ ನಿರೀಕ್ಷೆ ತುಸು ಹೆಚ್ಚೇ ಎನ್ನಬಹುದು. ಏಕೆಂದರೆ ದೀಪಾವಳಿ ಎಂದರೆ ಬೆಳಕಿನ ಹಬ್ಬ, ಎಲ್ಲೆಲ್ಲೂ ದೀಪಗಳ ಸಾಲು ಕಣ್ಮನಸನ್ನು ಸೆಳೆಯುತ್ತದೆ.

ಎಲ್ಲಾ ಹಬ್ಬಗಳಲ್ಲಿ ನಾಲ್ಕಾರು ದೀಪಗಳನ್ನು ಹಚ್ಚಬೇಕಾದರೆ, ದೀಪಾವಳಿಯಲ್ಲಿ ದೀಪಗಳದ್ದೇ ಹಬ್ಬವಾಗಿರುವುದರಿಂದ, ಎಲ್ಲೆಡೆ ಪುಟ್ಟ ಹಣತೆಗಳನ್ನು ಬೆಳಗಿ ಸಂಭ್ರಮ ಪಡುವುದು ಶಿಷ್ಟಾಚಾರ. ಆದರೆ ಕಾಲ ಬದಲಾದಂತೆ ಹಬ್ಬಗಳಲ್ಲಿ ಸಂಪ್ರದಾಯಕ್ಕಿಂತ ಹೆಚ್ಚಾಗಿ, ಕೆಲವೊಂದು ಆಚರಣೆ,ಆ–ಡಂಬರ, ಅಬ್ಬರಗಳೆ ಹೆಚ್ಚಾಗಿ ಮೇಳೈಸುತ್ತದೆ. ಅದಕ್ಕೆ ಒಳ್ಳೆಯ ಉದಾಹರಣೆ ಎಂದರೆ ದೀಪಾವಳಿ ಹಬ್ಬ.



ಬೆಳಕಿನ ಹಬ್ಬ ಎಂದು ಕರೆಯುವುದರಿಂದ ಇಲ್ಲಿ ದೀಪಗಳಿಗಿಂತ ಪಟಾಕಿಂ–ರು ಬೆಳಕು ಹಾಗೂ ಶಬ್ದವೇ ಹೆಚ್ಚಾಗಿ ಕೇಳಿ, ಕಂಡು ಬರುತ್ತದೆ. ಇದರ ಅಬ್ಬರ ಹಾವಳಿಯನ್ನು ಹೇಳಲು ಸುಲಭ ಸಾಧ್ಯವಲ್ಲ. ಪಟಾಕಿ ಸಿಡಿಸುವುದರಿಂದ ಪಟಾಕಿ ಸಿಡಿಸುವವರ ಮನಸ್ಸಿಗೆ ಸಮಾಧಾನ ಸಿಕ್ಕಿದರೆ, ಸುಂದರವಾದ ಪಟಾಕಿಂ–ರು ಚಿತ್ತಾರದ ನೋಟಗಳು ಮನ ಸೆಳೆದರೆ, ಜೋರಾದ ಪಟಾಕಿಯ ಶಬ್ದಗಳು ಕೆಲವರ ಉತ್ಸಾಹವನ್ನು ಹೆಚ್ಚಿಸುತ್ತದೆ. ಮತ್ತು ದೀಪಾವಳಿಯ ಮೆರಗನ್ನು ಹೆಚ್ಚಿಸುತ್ತದೆ ಎನ್ನುವುದನ್ನೂ ಅಲ್ಲಗೆಳೆಯವಂತಿಲ್ಲವಾದರೂ, ಇದ–ರಿಂದ ಸಾಧಕಕ್ಕಿಂತ ಬಾಧಕವೇ ಜಾಸ್ತಿ.



ಕೋಟ್ಯಂತರ ರೂಪಾಯಿಗಳ ವ್ಯವಹಾರ ಪಟಾಕಿಯಲ್ಲಿ ಆಗುತ್ತಿದ್ದರೂ, ಇದು ಹಲವರ ಬದುಕಿಗೆ ಕತ್ತಲೆಯನ್ನು ತುಂಬಿಬಿಡುತ್ತದೆ. ಕೆಲವೊಮ್ಮೆ ಮಕ್ಕಳು ಹಿರಿಯರ ಮಾತನ್ನು ಕೇಳದೆಯೂ, ಪಟಾಕಿಯನ್ನು ಹಚ್ಚುವ ಸಂಭ್ರಮದಲ್ಲಿ ತೊಡಗಿ ಅನಾಹುತಗಳಿಗೆ ಕಾರಣ–ರಾಗುತ್ತಾರೆ. ಹಾಗೆಯೇ ದೊಡ್ಡವರು ಕೂಡ ಪಟಾಕಿ ಅನಾಹುತದಿಂದ ತಮ್ಮ ಬದುಕನ್ನು ಕತ್ತಲೆಯಲ್ಲಿ ಮುಳುಗಿಸಿಕೊಂಡಿದ್ದರ ಉದಾಹರಣೆ ದೀಪಾವಳಿಯ ಆಸುಪಾಸಿನಲ್ಲಿ ಕೇಳುತ್ತಲೇ ಇರುತ್ತೇವೆ. ಇವೆಲ್ಲವೂ ಪಟಾಕಿ ಹಾವಳಿಯ ಒಂದು ಮುಖವಾದರೆ, ಇನ್ನೊಂದು ಮುಖ ಪರಿಸರ ಮಾಲಿನ್ಯದ್ದು, ಪಟಾಕಿ ಸಿಡಿಸುವುದರಿಂದ ಅನೇಕ ವಿಷಾನಿಲಗಳು ವಾತಾವರಣ–ಕ್ಕೆ ಬಿಡುಗಡೆಯಾಗಿ ವಾತಾವರಣ ಕಲುಷಿತಗೊಳ್ಳುತ್ತದೆ. ಹಾಗೆಯೇ ಅದರ ಕರ್ಣ ಕಠೋರ ಶಬ್ದದಿಂದ, ಪ್ರಾಣಿ, ಪಕ್ಷಿಗಳು, ಮನುಷ್ಯರು ಕೂಡ ತೊಂದರೆಗೆ ಒಳಗಾಗುತ್ತಾರೆ. ಚಿಕ್ಕ ಮಕ್ಕಳು ಕಾಯಿಲೆಗೆ ಒಳಗಾದರಿಗೆ ಆ ಶಬ್ದದಿಂದ ಹೆಚ್ಚಿನ ತೊಂದರೆ ಉಂಟಾಗಬಹುದು. ಹಾಗೆಯೇ ಪಟಾಕಿಗಳಿಂದ ಬೆಂಕಿ ಅವಘಡಗಳು ಹೆಚ್ಚಾಗಬಹುದು. ಹಾಗಾಗಿ ಆದಷ್ಟು ಪರಿಸರ ಸ್ನೇಹಿ ಹಾಗೂ ಕಡಿಮೆ ಹೊಗೆ ಬರುವಂತಹ, ಕಡಿಮೆ ಶಬ್ದ ಬರುವಂತಹ ಪಟಾಕಿಗಳನ್ನು ಉಪಯೋಗಿಸುವುದು ಒಳಿತು.

ಹಾಗೆಯೇ ಪಟಾಕಿಗಳನ್ನು ತಯಾರಿಸುವ ಸ್ಥಳ, ಸಂಗ್ರಹಿಸುವ ಸ್ಥಳ, ಮಾರಾಟ ಮಾಡುವ ಸ್ಥಳಗಳಲ್ಲೂ ಕೂಡ ಅತಿ ಹೆಚ್ಚಿನ ಜಾಗೃತಯ ಅವಶ್ಯಕತೆ ಇದೆ. ಪಟಾಕಿ ದುರಂತಗಳನ್ನು ಆಗಾಗ ಎಲ್ಲಾ ಕಡೆ ಕೇಳುತ್ತಲೇ ಇರುತ್ತೇವೆ, ದೀಪಾವಳಿಯಲ್ಲದೆ ಪಟಾಕಿಗಳನ್ನು ಇನ್ನಿತರೆ ಶುಭ ಸಮಾರಂಭ ಹಾಗೂ ಕೆಲವು ಹಬ್ಬ, ಮದುವೆ ಮುಂತಾದ ಎಲ್ಲಾ ಸಂಭ್ರಮಗಳಲ್ಲೂ ಬಳಸಲಾಗುತ್ತದೆ. ಆದರೆ ಅತಿ ಹೆಚ್ಚಾಗಿ ಬಳಸುವುದು ಹೊಸ ವರ್ಷದ ಸಂಭ್ರಮದಲ್ಲಿ ಹಾಗೂ ದೀಪಾವಳಿಯಲ್ಲಿ. ಹಾಗಾಗಿ ಬೆಳಕಿನ ಹಬ್ಬವನ್ನು ಆಚರಿಸುವಾಗ ಆದಷ್ಟು ಪರಿಸರ ಸ್ನೇಹಿ ದೀಪಗಳನ್ನು ಬೆಳಗಿ, ಕತ್ತಲೆಯನ್ನು ಓಡಿಸೋಣ. ಹಾಗೂ ಪರಿಸರಸ್ನೇಹಿ ಪಟಾಕಿಗಳನ್ನು ಆದಷ್ಟು ಕಡಿಮೆ ಪ್ರಮಾಣದಲ್ಲಿ ಬಳಸೋಣ. ಆದಷ್ಟು ಮುಂಜಾಗ್ರತೆ ವಹಿಸೋಣ ಅಲ್ಲವೇ.

ಎಲ್ಲರಿಗೂ ದೀಪಾವಳಿ ಹಬ್ಬದ ಶುಭಾಶಯಗಳು

